ಸಂಪುಟ : 9 ಸಂಚಿಕೆ 33 ಪುಟ : 4 ಬೆಲೆ: 3.00 ರವಿವಾರ ಮಾರ್ಚ್ 3, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 33 Pages : 4 Price : 3.00 Sunday March 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮ್ಮೇಳನ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಜನರ ವಿಶ್ವಾಸಕ್ಕೆ ಕಾಂಗ್ರೆಸ್ ಎಂದೂ ದ್ರೋಹ ಬಗೆದಿಲ್ಲ



**■ವಿಜಯಸಾಕ್ಷಿ ಸುದ್ದಿ, ರೋಣ**

ಚುನಾವಣಾ ಪೂರ್ವದಲ್ಲಿ ಗ್ಯಾರಂಟಿ ಕಾರ್ಡ್‌ಗಳನ್ನು ಮನೆ ಮನೆಗೆ ತಲುಪಿಸಿದ್ದೆವು. ಅದೇ ರೀತಿ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳನ್ನು ಸಹ ಮನೆ ಮನೆಗೆ ತಲುಪಿಸಿದ್ದೇವೆ. ಕಾಂಗ್ರೆಸ್ ಪಕ್ಷದ ಮೇಲೆ ಜನರಿಗೆ ಇರುವ ವಿಶ್ವಾಸ ಬಹುದೊಡ್ಡದು. ಅದನ್ನು ಉಳಿಸಿಕೊಂಡಿದ್ದೇವೆ. ಅದೇ ರೀತಿ ಮುಂದೆಯೂ ಕಾಂಗ್ರೆಸ್ ಸರ್ಕಾರಕ್ಕೆ ಜನಾಶೀರ್ವಾದ ಇರಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ರೋಣ ಹಾಗೂ ಗಜೇಂದ್ರಗಡ ತಾಲೂಕು ಆಡಳಿತಗಳ ಸಹಯೋಗದಲ್ಲಿ ರೋಣ ಪಟ್ಟಣದ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣದಲ್ಲಿ ಶನಿವಾರ ಜರುಗಿದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮ ಉದ್ಘಾಟಿಸಿ ಸಚಿವರು ಮಾತನಾಡಿದರು.

ಪ್ರತಿ ತಿಂಗಳು ಪಂಚ ಗ್ಯಾರಂಟಿಗಳಾದ ಅನ್ನಭಾಗ್ಯ ಯೋಜನೆಯಡಿ 12 ಕೋಟಿ, ಗೃಹಲಕ್ಷ್ಮೀ ಯೋಜನೆಗೆ 44 ಕೋಟಿ, ಗೃಹಜ್ಯೋತಿಗೆ 10 ಕೋಟಿ ಹಾಗೂ ಶಕ್ತಿ ಯೋಜನೆಗೆ ಅಂದಾಜು 20 ಕೋಟಿ ಹಾಗೂ ಯುವನಿಧಿ ಸೇರಿದಂತೆ ಒಟ್ಟಾರೆ ಗದಗ ಜಿಲ್ಲೆಗೆ ಗ್ಯಾರಂಟಿ ಯೋಜನೆಯಡಿ ಪ್ರತಿ ತಿಂಗಳು 100 ಕೋಟಿ ರೂ. ಸರ್ಕಾರದ ಅನುದಾನ ಬಳಕೆಯಾಗುತ್ತಿದೆ. ಜನರ ವಿಶ್ವಾಸಕ್ಕೆ ಕಾಂಗ್ರೆಸ್ ಎಂದೂ ದ್ರೋಹ ಬಗೆದಿಲ್ಲ. ಬಡವರ, ದಲಿತರ, ಅಲ್ಪಸಂಖ್ಯಾತರ, ಹಿಂದುಳಿದ ವರ್ಗದವರ ಏಳ್ಗೆಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಸಬಲತೆ ಸೃಷ್ಟಿಯಾಗಿದೆ. ಬಡವರ ಆರ್ಥಿಕ ಗುಣಮಟ್ಟ ಹೆಚ್ಚಾಗುತ್ತಿದೆ. ಗಜೇಂದ್ರಗಡದಿಂದ ಕಾಲಕಾಲೇಶ್ವರಕ್ಕೆ 2024ರ ವರ್ಷದಲ್ಲಿಯೇ ಕೇಬಲ್ ಕಾರ್ ಯೋಜನೆ ಆರಂಭಿಸಲಾಗುವುದು ಎಂದರು.

ಕಂದಾಯ ಸಚಿವ ಕೃಷ್ಣ ಭೈರೇಗೌಡ ಮಾತನಾಡಿ, ಸರ್ಕಾರ ನೀಡಿರುವ ಗ್ಯಾರಂಟಿಗಳು ಜನಸಾಮಾನ್ಯರಿಗೆ ತಲುಪಿದೆಯೇ ಎಂಬ ಖಾತರಿಗಾಗಿ ಈ ಗ್ಯಾರಂಟಿ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಬಡ ಜನರ ಜೀವನವನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವಲ್ಲಿ ಗ್ಯಾರಂಟಿಗಳ ಪಾತ್ರ ಪ್ರಧಾನವಾಗಿದ್ದು, ಮಹಿಳೆಯರು ಸ್ವಾಲಂಬಿಗಳಾಗಿ ಬದುಕಲು ಶಕ್ತಿ ಯೋಜನೆ ಉಪಯುಕ್ತವಾಗಿದೆ ಎಂದರು.

▸▸3ನೇ ಪುಟಕ್ಕೆ

> ವಿರೋಧ ಪಕ್ಷದವರ ಅಧಿಕಾರಾವಧಿಯಲ್ಲಿ ಹಣದುಬ್ಬರ ಹೆಚ್ಚಾಗಿ ಶ್ರೀಮಂತರ ತೆರಿಗೆಯನ್ನು ಕಡಿಮೆಗೊಳಿಸಿ, ಜನಸಾಮಾನ್ಯರ ಮೇಲೆ ತೆರಿಗೆಯನ್ನು ಹೆಚ್ಚು ಮಾಡಿ, ದಿನನಿತ್ಯದ ಜೀವನದ ಮೇಲೆ ಬರೆ ಎಳೆದ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಮೂಲಕ ಪ್ರತಿ ಕುಟುಂಬಕ್ಕೆ ನೇರವಾಗಿ ಅಥವಾ ಪರೋಕ್ಷವಾಗಿ ಪ್ರತಿ ತಿಂಗಳು 4–5 ಸಾವಿರ ರೂ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವಲ್ಲಿ ಗ್ಯಾರಂಟಿ ಯೋಜನೆಗಳ ಪಾತ್ರ ಹೆಚ್ಚಿದೆ.
>
> **– ಕೃಷ್ಣ ಭೈರೇಗೌಡ.**
> ಕಂದಾಯ ಸಚಿವರು.

ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ–ಕ್ಕೆ ಬೆಂಬಲಿಸಿ ಸರ್ಕಾರ ರಚನೆಗೆ ಆಶೀರ್ವಾದ ಮಾಡಿದ್ದೀರಿ. ಸಿಎಂ ಸಿದ್ದರಾಮಯ್ಯ ನಿಮಗೆ ನೀಡಿದ ಗ್ಯಾರಂಟಿ ಭರವಸೆ ಈಡೇರಿಸಿದ್ದಾರೆ. 2013ರಲ್ಲಿ ನೀಡಿದ 168 ಭರವಸೆಗಳನ್ನು ಸಹ ಈಡೇರಿಸಿದ್ದರು ಎಂಬುದನ್ನು ನೆನಪಿಡಬೇಕು. ಸಿ.ಎಂ ಆದ ತಕ್ಷಣ ಮೊದಲು ಗ್ಯಾರಂಟಿ ಘೋಷಣೆ ಮಾಡಿದವರು ಸಿದ್ದರಾಮಯ್ಯ. ಇಂದಿನ ವ್ಯವಸ್ಥೆಯಲ್ಲಿ ಜಿಲ್ಲಾಡಳಿತ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿ ಮಾಡಿದೆ ಎಂದು ಜಿ.ಎಸ್. ಪಾಟೀಲ ಹೇಳಿದರು.



> ಸರ್ಕಾರ ಗ್ಯಾರಂಟಿ ಯೋಜನೆಗಳಿಂದ ದಿವಾಳಿ ಆಗಿಲ್ಲ. ಆಗುವುದೂ ಇಲ್ಲ. ರಾಜ್ಯ ಆರ್ಥಿಕವಾಗಿ ಉತ್ತಮ ಸ್ಥಿತಿಯಲ್ಲಿದೆ. 3.71 ಲಕ್ಷ ಕೋಟಿ ರೂ ಆಯವ್ಯಯವನ್ನು ಸಿಎಂ ಮಾಡಿದ್ದು, ಇದರಲ್ಲಿ 52 ಸಾವಿಕ ಕೋಟಿ ರೂ ಗ್ಯಾರಂಟಿ ಯೋಜನೆಗಳಿಗೆ ಮೀಸಲಿರಿಸಿದ್ದಾರೆ. ಗ್ಯಾರಂಟಿ ಯೋಜನೆ ನಿರಂತರವಾಗಿ ಇರಲಿವೆ.
>
> **– ಬಸವರಾಜ ರಾಯರೆಡ್ಡಿ.**
> ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು, ಯಲಬುರ್ಗಾ ಶಾಸಕರು.



### ‘ಮಕ್ಕಳ ಹಬ್ಬ’ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಮಕ್ಕಳೆಲ್ಲರಿಗೂ ಉಜ್ವಲ ಭವಿಷ್ಯ ಕಾದಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳನ್ನು ಪ್ರೋತ್ಸಾಹಿಸಿ, ಅವರ ಭವಿಷ್ಯ ನಿರ್ಮಾಣಕ್ಕೆ ಮಕ್ಕಳ ಹಬ್ಬದಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ನಗರದ ಕನಕ ಭವನದಲ್ಲಿ ಶನಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಧಾರವಾಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ‘ಮಕ್ಕಳ ಹಬ್ಬ’ ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

▸▸3ನೇ ಪುಟಕ್ಕೆ




#### ಮಕ್ಕಳಿಗಾಗಿ ಪುಟಾಣಿ ರೈಲು ಕೊಡುಗೆ

ಮಕ್ಕಳಲ್ಲಿ ಆಟದ ವಾತಾವರಣ ನಿರ್ಮಿಸಿ ಸಂತಸಪಡಿಸಲು ಗದಗನಲ್ಲಿನ ಸಾಲುಮರದ ತಿಮ್ಮಕ್ಕನ ಉದ್ಯಾನವನದಲ್ಲಿ ಮಕ್ಕಳಿಗಾಗಿ ಪುಟಾಣಿ ರೈಲು ಓಡಿಸಲಾಗುವುದು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

## ಶಿವರಾತ್ರಿ ಹಬ್ಬ: ವಿಶೇಷ ಸಾರಿಗೆ ಕಾರ್ಯಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾರ್ಚ್ 8ರ ಶುಕ್ರವಾರದಂದು ಶಿವರಾತ್ರಿ ಹಬ್ಬದ ಪ್ರಯುಕ್ತ ರಜೆ ಇರುವುದರಿಂದ, ಮಾರ್ಚ್ 9 ರಂದು 2ನೇ ಶನಿವಾರ ವಾರಾಂತ್ಯ, ಮಾರ್ಚ್ 10 ರಂದು ಭಾನುವಾರ, ಇರುವುದರಿಂದ ಈ ರಜೆಗಳನ್ನು ಉಪಯೋಗಿಸಿಕೊಂಡು, ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ಹಬ್ಬಕ್ಕಾಗಿ ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಹಬ್ಬದ ಅವಧಿಯಲ್ಲಿ ಸುಮಾರು 110 ವಿಶೇಷ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ.

ಹಬ್ಬ ಮುಗಿದ ಮೇಲೆ ಮಾರ್ಚ್ 10 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಸುಖಕರ ಹಾಗೂ ಸುರಕ್ಷಿತ ಪ್ರಯಾಣಿಕ್ಕಾಗಿ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮುಖ್ಯ ಸಂಚಾರ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಪತ್ರಿಕಾಗೋಷ್ಠಿಯಲ್ಲಿ ಕಂದಾಯ ಸಚಿವ ಕೃಷ್ಣ ಭೈರೇಗೌಡ । 116 ಹಳ್ಳಿಗಳಿಗೆ ಟ್ಯಾಂಕರ್ ಮೂಲಕ ನೀರು

# ಬರ ನಿರ್ವಹಣೆಗೆ ವಿಶೇಷ ಗಮನ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ 123 ತಾಲೂಕುಗಳಲ್ಲಿ ಬರ ಆವರಿಸಿದೆ. ಬರ ನಿರ್ವಹಣೆಗೆ 900 ಕೋಟಿ ರೂ. ಸರಕಾರ ಒದಗಿಸಿದೆ. ಆ ಪೈಕಿ 875 ಕೋಟಿ ರೂ. ಜಿಲ್ಲಾಧಿಕಾರಿಗಳ ಖಾತೆಯಲ್ಲಿದ್ದು, ತುರ್ತು ಪರಿಸ್ಥಿತಿಗೆ ಬಳಸಲು ಸೂಚನೆ ನೀಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದರು.

ರೋಣ ಪಟ್ಟಣದಲ್ಲಿ ಶನಿವಾರ ನಡೆದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ ಭಾಗವಹಿಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರ ನಿರ್ವಹಣೆಯಲ್ಲಿ ಕುಡಿಯುವ ನೀರು ಹಾಗೂ ಮೇವಿಗೆ ಹೆಚ್ಚು ಒತ್ತು ನೀಡಲಾಗಿದೆ. ರಾಜ್ಯದ 116 ಹಳ್ಳಿಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ. 400ಕ್ಕೂ ಹೆಚ್ಚು ಹಳ್ಳಿಗಳಿಗೆ ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದೆ ಎಂದರು.

ಬರ ನಿರ್ವಹಣೆಗಾಗಿ ಶಾಸಕರ ಅಧ್ಯಕ್ಷತೆಯಲ್ಲಿ 600 ಟಾಸ್ಕ್‌ಫೋರ್ಸ್ ಸಭೆ ನಡೆದಿದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ 226 ಸಭೆಗಳನ್ನು ಮಾಡಲಾಗಿದೆ. ಈ ಎಲ್ಲ ಕ್ರಮಗಳ ಮೂಲಕ ಬರ ನಿರ್ವಹಣೆಯನ್ನು ಸಮರ್ಥವಾಗಿ ನಿರ್ವಹಿಸಲು ಕ್ರಮ ಕೈಗೊಂಡಿದ್ದೇವೆ ಎಂದು ತಿಳಿಸಿದರು.

ಬರ ಪರಿಹಾರ ಒದಗಿಸುವಂತೆ ಕೇಂದ್ರ ಸರಕಾರಕ್ಕೆ ಮನವಿ ಸಲ್ಲಿಸಿ 5 ತಿಂಗಳಾದರೂ ರಾಜ್ಯದ ರೈತರ ಕಷ್ಟಕ್ಕೆ ಸ್ಪಂದಿಸಲಿಲ್ಲ. ಕೇಂದ್ರ ಸರಕಾರದ ವಿಳಂಬ ನೀತಿಯನ್ನು ಖಂಡಿಸಿ ದೆಹಲಿಯಲ್ಲಿ ರಾಜ್ಯ ಸರಕಾರ ಪ್ರತಿಭಟನೆ ದಾಖಲಿಸಿತು. ಇಷ್ಟಾದರೂ ರೈತರಿಗೆ ನ್ಯಾಯ ಕೊಡುವ ಕೆಲಸ ಮಾಡಲಿಲ್ಲ. ಒಕ್ಕೂಟ ವ್ಯವಸ್ಥೆಯಲ್ಲಿ ಇದಕ್ಕಿಂತ ದೊಡ್ಡ ಅನ್ಯಾಯ ಮತ್ತೊಂದಿಲ್ಲ. ಹೀಗಾಗಿ ರಾಜ್ಯ ಸರಕಾರವೇ ಮೊದಲ ಹಂತವಾಗಿ ಪ್ರತಿ ರೈತರಿಗೆ 2 ಸಾವಿರ ರೂ.ಗಳಂತೆ ಒಟ್ಟು 34 ಲಕ್ಷ ರೈತರಿಗೆ ಪರಿಹಾರ ನೀಡಲಾಗಿದೆ. ಕೇಂದ್ರ ಬರ ಪರಿಹಾರ ಬಿಡುಗಡೆ ಮಾಡಿದರೆ ತಕ್ಷಣ ಅದನ್ನು ರೈತರಿಗೆ ವರ್ಗಾಯಿಸಲು ಎಲ್ಲ ಸಿದ್ಧತೆ ಮಾಡಿಕೊಂಡಿದ್ದೇವೆ ಎಂದರು.

ರಾಜ್ಯದಲ್ಲಿ 2018ರಿಂದ 2022ರವರೆಗೆ 64 ತಾಲೂಕುಗಳನ್ನು ರಚಿಸಲಾಯಿತು. ಆ ಪೈಕಿ ಹಿಂದಿನ ಸರಕಾರದ ಅವಧಿಯಲ್ಲಿ 14 ತಾಲೂಕು ಆಡಳಿತ ಭವನ ನಿರ್ಮಾಣಕ್ಕೆ ಮಾತ್ರ ಅನುಮೋದನೆ ನೀಡಿದೆ. ನಮ್ಮ ಸರಕಾರ ಮುಂದಿನ 2–3 ವರ್ಷಗಳಲ್ಲಿ 46 ತಾಲೂಕು ಆಡಳಿತ ಭವನ ನಿರ್ಮಾಣಕ್ಕೆ ಮುಂದಾಗಲಿದೆ ಎಂದರು.

ಸ್ಟಾಂಪ್ ಡ್ಯೂಟಿ ಕಳೆದ 40 ವರ್ಷಗಳಿಂದ ಪರಿಷ್ಕರಣೆ ಆಗಿಲ್ಲ. ಕೆಲವು ಸ್ಟಾಂಪ್ ಡ್ಯೂಟಿಗಳನ್ನು ಹೆಚ್ಚಳ ಮಾಡಲಾಗಿದೆ. ಬೇರೆ ರಾಜ್ಯಗಳಲ್ಲಿ ಸ್ಟಾಂಪ್ ಡ್ಯೂಟಿಗಳನ್ನು ಪರಿಶೀಲನೆ ಮಾಡಿ ರಾಜ್ಯದಲ್ಲಿ ಜಾರಿಗೆ ತರಲಾಗಿತ್ತು. ರೈತರಿಗೆ ಅನಾನುಕೂಲವಾದರೆ ಸ್ಟಾಂಪ್ ಡ್ಯೂಟಿ ಪರಿಷ್ಕರಣೆ ಮಾಡಲಾಗುವುದು ಎಂದರು.

ಬೆಂಗಳೂರು ಬ್ಲಾಸ್ಟ್ ಪ್ರಕರಣ ಕುರಿತು ಮಾತನಾಡಿದ ಕೃಷ್ಣ ಭೈರೇಗೌಡ, ಗಲಭೆ ಮಾಡಿಸುವುದೇ ಬಿಜೆಪಿಯ ಕೆಲಸವಾಗಿದೆ. ಬೆಂಗಳೂರಿನಲ್ಲಿ ನಡೆದಿರುವುದು ದುರದೃಷ್ಟಕರ ಘಟನೆ. ಸರ್ಕಾರ ಎಲ್ಲ ಆಯಾಮಗಳಲ್ಲಿ ತನಿಖೆ ಮಾಡುತ್ತಿದೆ. ಘಟನೆ ಯಾಕೆ, ಹೇಗೆ ನಡೆದಿದೆ ಎಂಬುದು ತನಿಖೆ ಆಗಬೇಕು. ಪ್ರಸ್ತುತವಾಗಿ ಘಟನೆಯಲ್ಲಿ ಗಾಯಾಳುಗಳ ಚಿಕಿತ್ಸೆಗೆ ಆದ್ಯತೆ ನೀಡಲಾಗುತ್ತಿದೆ ಎಂದರು.



> ರಾಜ್ಯ ಸರಕಾರದ ಐದು ಗ್ಯಾರಂಟಿಗಳು ಜನಮನಕ್ಕೆ ತಲುಪಿವೆ. ಗಜೇಂದ್ರಗಡ ಹಾಗೂ ರೋಣ ತಾಲೂಕಿನಲ್ಲಿ ಗ್ಯಾರಂಟಿ ಕಾರ್ಯಕ್ರಮಗಳು ಶೇ. 99ರಷ್ಟು ಜನರಿಗೆ ತಲುಪಿರುವುದು ಸಂತೋಷ ತಂದಿದೆ. ಈ ಹಿನ್ನೆಲೆಯಲ್ಲಿ ಗಜೇಂದ್ರಗಡ–ಕಾಲಕಾಲೇಶ್ವರ ಗುಡ್ಡಕ್ಕೆ ಕೇಬಲ್ ಕಾರ್ (ರೋಪ್ ವೇ) ಕೊಡುಗೆ ಮಾಡುವ ಜೊತೆಗೆ ಈ ವರ್ಷವೇ ಪೂರ್ಣಗೊಳಿಸಲಾಗುವುದು.
>
> **– ಎಚ್.ಕೆ. ಪಾಟೀಲ.**
> ಕಾನೂನು, ಪ್ರವಾಸೋದ್ಯಮ ಸಚಿವರು.

#### ಪಾಕಿಸ್ತಾನ ಜಿಂದಾಬಾದ್’ ಘಟನೆಗೆ ಖಂಡನೆ

ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ‘ಪಾಕಿಸ್ತಾನ್ ಜಿಂದಾಬಾದ್’ ಘಟನೆಯ ಕುರಿತು ಖಂಡನೆ ವ್ಯಕ್ತಪಡಿಸಿದರು. ಶಕ್ತಿ ಸೌಧದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಪಾಲುದಾರರಾದವರನ್ನು ಶಿಕ್ಷೆಗೆ ಒಳಪಡಿಸಲು ಸರ್ಕಾರ ಸಿದ್ಧವಿದೆ. ಈ ಘೋಷಣೆ ಕೂಗಲು ಪ್ರಚೋದನೆ ನೀಡಿದವರನ್ನು ಸರ್ಕಾರ ಬಿಡಲು ಸಾಧ್ಯವಿಲ್ಲ. ಈ ಘಟನೆ ಹಿಂದೆ ಕಾಣದ ಕೈಗಳಿವೆ. ಅದನ್ನು ಪತ್ತೆ ಹಚ್ಚುವ ಕೆಲಸ ಸರ್ಕಾರ ಮಾಡುತ್ತಿದೆ ಎಂದು ಎಚ್.ಕೆ. ಪಾಟೀಲ ಹೇಳಿದರು. ಬೆಂಗಳೂರು ಬಾಂಬ್ ಬ್ಲಾಸ್ಟ್ ಪ್ರಕರಣದ ಕುರಿತು ಪ್ರತಿಕ್ರಿಯಿಸಿ, ಎರಡು ದಿನಗಳಲ್ಲಿ ಆರೋಪಿಗಳನ್ನು ಪತ್ತೆ ಹಚ್ಚುವ ಕೆಲಸ ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

## ಸಹಕಾರ ಸಂಘಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಹಕಾರ ಸಂಘಗಳಾದ ಶ್ರೀ ಓಂ ಸಾಯಿ ಮಹಿಳಾ ಪತ್ತಿನ ಸಹಕಾರ ಸಂಘ ನಿ, ಮುಳಗುಂದ ತಾ:ಗದಗ, ಲಕ್ಷ್ಮೀ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ, ಶಿರೋಳ ತಾ: ನರಗುಂದ, ರೋಣ ತಾಲೂಕಾ ಉಣ್ಣೆ ಮತ್ತು ಕುರಿ ಸಂಗೋಪನಾ ಸಹಕಾರ ಸಂಘ ನಿ, ನರೇಗಲ್ ತಾ:ಗಜೇಂದ್ರಗಡ , ರಾಧಾಕೃಷ್ಣ ಗೃಹ ನಿರ್ಮಾಣ ಸಹಕಾರ ಸಂಘ ನಿ ಬಿಂಕದಕಟ್ಟಿ ತಾ: ಗದಗ, ನೀಲಾಂಬಿಕಾ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಕದಡಿ ತಾ:ಗದಗ, ಮಯೂರ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಮುಂಡರಗಿ, ಡಿಸ್ಟ್ರಿಕ್ಟ್ ಪ್ರಿಂಟಿಂಗ್ ಮತ್ತು ಪಬ್ಲಿಷಿಂಗ್ ಕೋ-ಆಪ್ ಸೊಸೈಟಿ ಲಿ, ಗದಗ, ಜಯಪ್ರಕಾಶ ಪ್ರಿಂಟಿಂಗ್ ಕೋ-ಆಪ್ ಸೊಸೈಟಿ ನಿ, ಗದಗ, ಶ್ರೀ ಕಪ್ಪತಗಿರಿ ಮಲ್ಲಿಕಾರ್ಜುನ ಎಸ್.ಸಿ /ಎಸ್‌ಟಿ/ಹಿಂದುಳಿದ/ ಅಲ್ಪಸಂಖ್ಯಾತರ ಕೂಲಿಕಾರರ ಸಂಘ ನಿ, ಹಿರೇವಡ್ಡಟ್ಟಿ, ವೆಂಕಟೇಶ್ವರ ಕಂಜುಮರ್ಸ್ ಕೋ-ಆಪ್ ಸೊಸ್ಯಟಿ ನಿ, ಗಜೇಂದ್ರಗಡ ಈ ಸಹಕಾರ ಸಂಘಗಳ ಕಾರ್ಯಾಚರಣೆಯನ್ನು ನಡೆಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿರುತ್ತವೆ.

ಸುಮಾರು 03 ವರ್ಷಕ್ಕಿಂತ ಮೇಲ್ಪಟ್ಟು ಲೆಕ್ಕ ಪರಿಶೋಧನೆ ಯಾಗಿರುವುದಿಲ್ಲ. ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿರುವುದಿಲ್ಲ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾ ಸಭೆಯನ್ನು ಜರುಗಿಸಿರುವುದಿಲ್ಲ. ಅಲ್ಲದೇ ಆಡಳಿತ ಮಂಡಳಿ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಕಾರ್ಯ ಚಟುವಟಿಕೆಗಳಿಗೆ ಆಸಕ್ತಿ ತೋರಿಸದೇ ಇರುವುದು ಕಂಡು ಬಂದಿದ್ದು ಇರುತ್ತದೆ ಮತ್ತು ಅಧಾವೆ ಪತ್ರಿಕೆಗಳು ಲಭ್ಯವಿರುವುದಿಲ್ಲ. ಆಡಳಿತ ಮಂಡಳಿ ಸದಸ್ಯರ ವಿಳಾಸವು ಲಭ್ಯವಿಲ್ಲದ್ದರಿಂದ, ಈ ಕೆಳಗಿನ ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ-125, ಗದಗ ಇವರನ್ನು ಭೇಟಿ ಮಾಡಬಹುದಾಗಿದೆ. ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 15 ದಿನಗಳೊಳಗಾಗಿ ಸಂಬಂಧಪಟ್ಟವರು ಬಾರದೇ ಹೋದಲ್ಲಿ ಸದರಿ ಸಹಕಾರ ಸಂಘಗಳನ್ನು ಸಮಾಪನೆ ಮಾಡಲು ಕ್ರಮವಿಡಲಾಗುವುದು. ಮುಂದೆ ಬರುವ ಯಾವುದೇ ಹೊಣೆಗಾರಿಕೆಗಳಿಗೆ ಸಮಾಪನಾಧಿಕಾರಿಗಳು ಹೊಣೆಗಾರರಾಗಿರುವುದಿಲ್ಲವೆಂದು ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಪದ್ಮಾ ಜೆ.ಕಬಾಡಿಯವರಿಗೆ 'ಗಾಯನಶ್ರೀ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ



ಡಾ. ವಿ.ಬಿ. ಹಿರೇಮಠ ಮೊಮೋರಿಯಲ್ ಪ್ರತಿಷ್ಠಾನ ಗದಗ ಇವರ ಆಶ್ರಯದಲ್ಲಿ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 110ನೇ ಜಯಂತ್ಯುತ್ಸವ ಸಮಾರಂಭದಲ್ಲಿ ರಾಜ್ಯಮಟ್ಟದ 'ಗುರು ಪುಟ್ಟರಾಜರ ಗಾಯನಶ್ರೀ' ಪ್ರಶಸ್ತಿಯನ್ನು ಗದುಗಿನ ಪದ್ಮಾ ಜೆ.ಕಬಾಡಿ ಅವರಿಗೆ ನೀಡಲಾಗುತ್ತಿದೆ.

ಕನ್ನಡ ನಾಡು-ನುಡಿ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ಸಾಮಾಜಿಕ ಹಾಗೂ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ಗಮನಿಸಿ, ಮಾ.3ರಂದು ನಡೆಯುವ ಶ್ರೀ ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 110ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತದೆ ಎಂದು ಪ್ರತಿಷ್ಠಾನದ ಅಧ್ಯಕ್ಷೆ ಡಾ. ವ್ಹಿ.ವ್ಹಿ. ಹಿರೇಮಠ ತಿಳಿಸಿದ್ದಾರೆ.


### ಲಿಂ. ಪಂ.ಡಾ. ಪುಟ್ಟರಾಜ ಗವಾಯಿಗಳ 110ನೇ ಜಯಂತಿ ನಿಮಿತ್ತ ಲೇಖನ

# ನಡೆದಾಡುವ ದೇವರ ಸ್ಮರಣೆ

ಪಂ. ಪುಟ್ಟರಾಜ ಗವಾಯಿಗಳು ಹುಟ್ಟಿದ್ದು ಹಾವೇರಿ ಜಿಲ್ಲೆ, ದೇವರಹೊಸಪೇಟೆ ತಾಲೂಕಿನಲ್ಲಿ, 1914ರ ಮಾರ್ಚ್ 3ರಂದು. ಹತ್ತು ತಿಂಗಳ ಮಗುವಿರುವಾಗ ತಂದೆ-ತಾಯಿಯನ್ನು ಕಳೆದುಕೊಂಡು ಅನಾಥರಾಗಿದ್ದ ಪುಟ್ಟಯ್ಯನವರಿಗೆ ಆಶ್ರಯವಾದವರು ಅವರ ಅಜ್ಜ ಚಂದ್ರಶೇಖರಯ್ಯನವರು, ತಮ್ಮ ಸಂಗೀತ ಜ್ಞಾನವನ್ನು ಪುಟ್ಟರಾಜರಿಗೆ ಧಾರೆ ಎರೆದರು. ನಂತರ ಪುಟ್ಟರಾಜರನ್ನು ಸಂಗೀತ ಸಾಮ್ರಾಟರಾದ ಪಂಚಾಕ್ಷರಿ ಗವಾಯಿಗಳ ಹತ್ತಿರ ಕರೆತಂದರು. ಅತ್ಯಂತ ಭಕ್ತಿ ಮನೋಭಾವದಿಂದ ಸಂಗೀತ ಅಧ್ಯಯನದ ಜೊತೆಗೆ ಪುಟ್ಟರಾಜರು ಪಂಚಾಕ್ಷರ ಗವಾಯಿಗಳ ಸೇವೆಯಲ್ಲಿ ನಿರತರಾಗಿ ಅತ್ಯುತ್ತಮ ಶಿಷ್ಯರೆನಿಸಿಕೊಂಡರು. ಪಂಚಾಕ್ಷರ ಗವಾಯಿಗಳ ಉತ್ತರಾಧಿಕಾರಿಯಾಗಿ ಪುಣ್ಯಾಶ್ರಮದ ಉಸ್ತುವಾರಿಯನ್ನು ನೋಡಿಕೊಳ್ಳಲು ಆರಂಭಿಸಿದರು.

ಗುರುವರ್ಯ ಪಂಡಿತ ಡಾ. ಪುಟ್ಟರಾಜ ಗವಾಯಿಗಳು ರಾಷ್ಟ್ರದ ಕೆಲವೇ ಶ್ರೇಷ್ಠ ಸಂಗೀತಗಾರರಲ್ಲಿ ಓರ್ವರಾಗಿದ್ದರು. ಸಂಗೀತ ಲೋಕದ ದಿಗ್ಗಜರಾಗಿ ನಾಡಿನ-ರಾಷ್ಟ್ರದ ಹಲವು ಪುರಸ್ಕಾರಗಳನ್ನು ಪಡೆದಿದ್ದಾರೆ. ಬಹುಭಾಷಾ ಪ್ರತಿಭೆ, ಪ್ರೌಢಿಮೆಯುಳ್ಳ ಡಾ. ಪುಟ್ಟರಾಜರು ಕನ್ನಡ, ಹಿಂದಿ ಹಾಗೂ ಸಂಸ್ಕೃತ ಭಾಷೆಗಳಲ್ಲಿ ಕವನಗಳನ್ನು ರಚಿಸಿದ್ದಾರೆ. ನಾಟಕ, ಪುರಾಣ, ಸಂಗೀತ ಸಿದ್ಧಾಂತ, ವ್ಯಾಖ್ಯಾನ, ಸಂಗೀತ ಪಠ್ಯ ಹಾಗೂ ಜೀವನ ವೃತ್ತಾಂತಗಳು ಮೊದಲಾಗಿ ಸುಮಾರು 62 ಕೃತಿಗಳನ್ನು ರಚಿಸಿದ್ದಾರೆ.

ಪಂ. ಡಾ. ಪುಟ್ಟರಾಜ ಗವಾಯಿಗಳವರು ಪುಣ್ಯಾಶ್ರಮವನ್ನು ಒಂದು ಬೃಹತ್ ಸಂಸ್ಥೆಯಾಗಿ ಮಾರ್ಪಡಿಸಿ ಸಂಗೀತ ಕ್ಷೇತ್ರದಲ್ಲಿ ಅಪೂರ್ವ ಸಾಧನೆ ಸಾಲದೆಂಬಂತೆ



ಧಾರ್ಮಿಕ-ಆಧ್ಯಾತ್ಮಿಕ ರಂಗದಲ್ಲಿಯೂ ಎತ್ತರಕ್ಕೇರಿ ಮುಗ್ಧತೆಯಿಂದಲೇ ಜನಸಾಮಾನ್ಯರ ಕಡೆಗೆ ಸ್ಪಂದಿಸುತ್ತ, ಜನರ ಬದುಕಿನಲ್ಲಿ ಪ್ರೇರಣೆ ಮತ್ತು ಸಾಂತ್ವನವನ್ನು ನೀಡುವ ಶಕ್ತಿಯಾಗಿ 'ನಡೆದಾಡುವ ದೇವರು' ಎಂದೇ ಸದ್ಭಕ್ತರ ಕಣ್ಮಣಿಯಾಗಿದ್ದಾರೆ.

ಸರಕಾರದಿಂದ ಯಾವುದೇ ನೆರವನ್ನು ಪಡೆಯದೇ ಇರುವ ಪುಣ್ಯಾಶ್ರಮವು ತನ್ನ ಸಾಮರ್ಥ್ಯದಿಂದಲೇ ನಡೆಯುತ್ತಿದೆ. ಉಚಿತ ವಸತಿ, ಊಟದ ಪ್ರಯೋಜನವನ್ನು ಪ್ರತಿ ದಿನ ಸಾವಿರಕ್ಕೂ ಹೆಚ್ಚು ಅಂಧರೂ, ಅನಾಥರೂ ಸೇರಿದಂತೆ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ಪಡೆಯುತ್ತಿದ್ದಾರೆ. ಪ್ರಾಥಮಿಕ ಶಿಕ್ಷಣದಿಂದ ಕಾಲೇಜು ಹಂತದವರೆಗೂ ಸಾಮಾನ್ಯ ಶಿಕ್ಷಣ ಹಾಗೂ ಲಲಿತ ಕಲೆಗಳ ಶಿಕ್ಷಣವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿದ್ದಾರೆ. ಪುಣ್ಯಾಶ್ರಮದ ಅಡಿಯಲ್ಲಿ ಸಂಗೀತ ಕಲೆ, ಸಾಮಾನ್ಯ ಶಿಕ್ಷಣಕ್ಕೆ ಸಂಬಂಧಿಸಿದಂತೆ ಹಲವು ಶಾಲಾ-ಕಾಲೇಜುಗಳಿದ್ದು ಅವುಗಳು ದೊಡ್ಡ ಸಂಸ್ಥೆಗಳಾಗಿ ಬೆಳೆಯುತ್ತಿವೆ.

ಡಾ ಪುಟ್ಟರಾಜರಿಗೆ ಗೌರವ ಡಾಕ್ಟರೇಟ್, ಕನಕ ಪುರಂದರ, ಪದ್ಮ ಭೂಷಣ, ಬಸವಶ್ರೀ, ನಾಡೋಜ ಹೀಗೆ ಅನೇಕ ಪ್ರಶಸ್ತಿಗಳು ಲಭಿಸಿವೆ. ಡಾ ಪುಟ್ಟರಾಜರು ತಮ್ಮ ವಿಶಿಷ್ಟ ಸಾಧನಾ ಬದುಕಿನಿಂದ ಒಂದು ಸಂಸ್ಥೆಯಾಗಿ ಬೆಳೆದರು ಹಾಗೂ ಬೃಹತ್ ಸಂಗೀತ ಸಂಸ್ಥೆಯನ್ನು ಪೋಷಿಸಿ ಬೆಳೆಸಿದ ಡಾ.ಪುಟ್ಟರಾಜ ಗವಾಯಿಗಳಿಗೆ ನಾಡಿನ, ರಾಷ್ಟ್ರದ ಅತ್ಯುತ್ತಮ ಪ್ರಶಸ್ತಿಗಳು ಇನ್ನೂ ಲಭಿಸದೆ ಇರುವುದು ಖೇದಕರವಾದ ಸಂಗತಿ.

ಭಕ್ತರಿಗೆ ದಾರಿ ದೀಪವಾಗಿ, ಬದುಕನ್ನು ಕಲಿಸಿ, ಕಷ್ಟಗಳನ್ನು ಆಲಿಸಿದ ಸಂತ 2010ರಲ್ಲಿ ಪರಮಾತ್ಮನಲ್ಲಿ ಲೀನರಾದರು. ಅವರ ತತ್ವಾದರ್ಶಗಳು ಮಾತ್ರ ಕೊನೆವರೆಗೂ ಅಮರ. ಡಾ. ಪುಟ್ಟರಾಜರ ಜಯಂತಿಯಂದು ಪ್ರತಿ ಮನೆ ಮನೆಯಲ್ಲೂ ಅವರ ಜಯಂತಿಯನ್ನು ಆಚರಿಸೋಣ, ಅವರ ಜನ್ಮದಿನವನ್ನು ವಿಶೇಷ ಹಬ್ಬವನ್ನಾಗಿ ಸಂಭ್ರಮಿಸೋಣ.

**- ಶ್ರೀಕಾಂತ ರವೀಂದ್ರ ಕೊಪ್ಪರ.**

### ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯಲ್ಲಿ ಮೊರಾರ್ಜಿ ದೇಸಾಯಿ ಜನ್ಮದಿನಾಚರಣೆ

# ಎಲ್ಲಾ ಸಂಪತ್ತಿಗಿಂತ ವಿದ್ಯಾ ಸಂಪತ್ತು ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗುರುವಿಗೆ ಶ್ರೇಷ್ಠ, ಪೂಜ್ಯನೀಯ ಸ್ಥಾನಮಾನವಿದ್ದು, ವ್ಯಕ್ತಿಯ ಬದುಕಿಗೆ ಶಿಕ್ಷಣ, ಜ್ಞಾನ, ಸಂಸ್ಕಾರ, ಸದ್ವಿಚಾರ, ಮಾನವೀಯ ಮೌಲ್ಯಗಳನ್ನು ಬಿತ್ತಿ ಉತ್ತಮ ನಾಗರಿಕರನ್ನಾಗಿ ಮಾಡಿದ ಗುರುಗಳು ಸದಾ ಸರಣೀಯರು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದಡಿ ನಡೆದ ಶ್ರೀ ಮೊರಾರ್ಜಿ ದೇಸಾಯಿಯವರ ಜನ್ಮ ದಿನಾಚರಣೆ, ಗುರುವಂದನೆ ಮತ್ತು ಹಳೆಯ ವಿದ್ಯಾರ್ಥಿಗಳ ಸಂಘದ 12ನೇ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಎಲ್ಲ ಸಂಪತ್ತಿಗಿಂತ ಯಾರೂ ಕದಿಯಲಾರದ ವಿದ್ಯಾ ಸಂಪತ್ತು ಶ್ರೇಷ್ಠವಾಗಿದೆ. ಪ್ರತಿಯೊಬ್ಬ ತಂದೆ-ತಾಯಿ, ಶಿಕ್ಷಕರು ಮಕ್ಕಳ ಭವಿಷ್ಯದ ಬಗ್ಗೆ ಹತ್ತಾರು ಆಸೆ-ಕನಸು-ಭರವಸೆ ಕಂಡಿರುತ್ತಾರೆ. ವಿದ್ಯಾರ್ಥಿಗಳು ಕಲಿಕಾ ಹಂತದಲ್ಲಿ ಸಮಯ ವ್ಯರ್ಥ ಮಾಡದೇ ಶ್ರದ್ಧೆ, ಪ್ರಾಮಾಣಿಕತೆ, ಸತತಾಭ್ಯಾಸದಿಂದ ಉತ್ತಮ ಅಂಕ ಗಳಿಸಬೇಕು. ಸರ್ಕಾರಗಳೂ ಹಿಂದುಳಿದ ವರ್ಗದ ಮತ್ತು ಬಡ ಮಕ್ಕಳ ಶಿಕ್ಷಣಕ್ಕಾಗಿ ಸಕಲ ಸೌಲಭ್ಯಗಳನ್ನು ಕಲ್ಪಿಸುತ್ತಿದ್ದು, ವಿದ್ಯಾರ್ಥಿಗಳು ಸೌಲಭ್ಯಗಳ ಸದುಪಯೋಗ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಕ್ಷೇತ್ರದಲ್ಲಿ ಶಾಲಾ-ಕಾಲೇಜು, ಹಾಸ್ಟೆಲ್‌ಗಳ ಅಭಿವೃದ್ಧಿಗೆ ಮೊದಲ ಆದ್ಯತೆಯ ಕಾರ್ಯ ಮಾಡುತ್ತೇನೆ ಎಂದರು.



ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶರಣಯ್ಯ ಕುಲಕರ್ಣಿ ಮಾತನಾಡಿ, ಶಾಲಾ ದಿನಗಳು ಮಾನವನ ಸರ್ವಾಂಗೀಣ ವ್ಯಕ್ತಿತ್ವಕ್ಕೆ ಬುನಾದಿಯಾಗಿದ್ದು, ಮಾನವನ ಜೀವನದುದ್ದಕ್ಕೂ ಶಾಲಾ ದಿನಗಳ ನೆನಪು ಅಮರವಾಗಿರುತ್ತದೆ. ವಸತಿ ಶಾಲೆಗಳಲ್ಲಿ ಇಂದು ಪೂರ್ಣ ಪ್ರಮಾಣದ ಸೌಲಭ್ಯವುಳ್ಳ ಪರಿಪೂರ್ಣ ಶಿಕ್ಷಣ ನೀಡಲಾಗುತ್ತಿದೆ. ಇಲ್ಲಿ ಓದುವ ಅವಕಾಶ ಪಡೆದ ನೀವೆಲ್ಲ ಧನ್ಯರು ಎಂದರು.

ಜಿಲ್ಲಾ ಸಮನ್ವಯಾಧಿಕಾರಿ ಡಿ.ಬಿ. ಅಡವಿ, ಪ್ರಾಚಾರ್ಯೆ ಡಿ.ಸಿ. ನರೇಗಲ್, ಎಸ್.ಆರ್. ಶಿರಹಟ್ಟಿ, ರಾಜು ರಜಪೂತ, ಬಿ.ಎಸ್. ಶಿರಿಯಪ್ಪಗೌಡರ, ಕಿರಣ ನಾಯಕ, ನಾಗರಾಜ ಕಳಸಾಪುರ, ಎನ್. ಕೆ. ಹತ್ತಿಕಾಳ, ಆರ್.ಬಿ. ಉದ್ದಣ್ಣವರ, ಎನ್‌ಸಿಕೆ ಪಾಟೀಲ, ಎಸ್.ಐ. ಸುಗಣ್ಣವರ, ಎಸ್.ಜೆ. ಮಕಾಂದಾರ, ಎಸ್.ಸಿ. ಕೆರಿಮನಿ, ಚಂದ್ರಶೇಖರ ಪಾಟೀಲ, ಎಂ.ಆಯ್. ಡಂಬಳ, ಎಸ್.ಎನ್. ತಳ್ಳಳ್ಳಿ ಸೇರಿದಂತೆ ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡು ಸಂಭ್ರಮಿಸಿದರು. ಸುಮಾ ಸಂಶಿ, ಗಣೇಶ ಚೌವ್ಹಾಣ, ಮಹೇಶ ತಳವಾರ, ಮಾಲತೇಶ ವರ್ದಿ ನಿರೂಪಿಸಿದರು.

### ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಲಕ್ಷ್ಮೇಶ್ವರ ಕಾರ್ಯಾಲಯ ಉದ್ಘಾಟನೆ

# ಚುನಾವಣೆ ಗೆಲ್ಲಲು ರಣತಂತ್ರ ರೂಪಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಅಧಿಕಾರದಲ್ಲಿರುವ ಹಾಗೂ ಈ ಹಿಂದೆ ಕೇಂದ್ರದಲ್ಲಿ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷದ ಸಾಧನೆಗಳನ್ನು ಜನರಿಗೆ ತಿಳಿಸುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು ಎಂದು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಹೇಳಿದರು.

ಅವರು ಪಟ್ಟಣದ ಪಿಕಾರ್ಡ ಬ್ಯಾಂಕ್ ಎದುರಿನಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಅಭಿಮಾನಿ ಬಳಗದಿಂದ ಹಾವೇರಿ ಗದಗ ಲೋಕಸಭಾ ಕ್ಷೇತ್ರ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಲಕ್ಷ್ಮೇಶ್ವರ ಕಾರ್ಯಾಲಯವನ್ನು ಉದ್ಘಾಟಿಸಿ, 'ನಮ್ಮ ಕಾಂಗ್ರೆಸ್-ನಮ್ಮ ಹೆಮ್ಮೆ' ಗೋಡೆ ಬರಹಕ್ಕೆ ಚಾಲನೆ ನೀಡಿ ಮಾತನಾಡಿದರು.

ಸದ್ಯದಲ್ಲಿಯೇ ಲೋಕಸಭಾ ಚುನಾವಣೆಗಳು ಬರಲಿದ್ದು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಈಗಿನಿಂದಲೆ ತಯಾರಾಗಬೇಕು. ಪಕ್ಷದ ಸಾಧನೆಗಳನ್ನು ಜನರಿಗೆ ತಿಳಿಸುವ ಕೆಲಸ ಆಗಬೇಕು. ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸುವ ಪಣ ತೊಡಬೇಕು. ಪಕ್ಷದ ಕಾರ್ಯಾಲಯದಲ್ಲಿ ಪಕ್ಷ ಚಟುವಟಿಕೆ ಬಗ್ಗೆ ಪಕ್ಷದ ಹಿರಿಯರ ಮಾರ್ಗದರ್ಶನದಲ್ಲಿ ಕಾರ್ಯಕರ್ತರು ಚುನಾವಣೆಯಲ್ಲಿ ಗೆಲ್ಲಲು ರಣತಂತ್ರ ರೂಪಿಸಬೇಕು ಎಂದು ಕರೆ ನೀಡಿದರು.




ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ನಗರ ಅಧ್ಯಕ್ಷ ಅಮರೀಶ ತೆಂಬದಮನಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಉತ್ತಮ ಆಡಳಿತ ನೀಡುತ್ತಿದ್ದು, ಭರವಸೆ ನೀಡಿದ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಸರಿಯಾದ ನಿಟ್ಟಿನಲ್ಲಿ ಜನರಿಗೆ ಹತ್ತಿರವಾಗುತ್ತಿರುವ ಕಾಂಗ್ರೆಸ್ ಪಕ್ಷದ ಜನಪರ ಯೋಜನೆಗಳನ್ನು ತಿಳಿಸುವ ಮೂಲಕ ಪಕ್ಷದ ಗೆಲುವಿಗೆ ಕಾರ್ಯಕರ್ತರು ಶ್ರಮಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರುಗಳಾದ ರಾಜೀವ ಕುಂಬಿ, ಸಾಹೇಬಜಾನ್ ಹವಾಲ್ದಾರ, ಮಹಾದೇವಪ್ಪ ಅಣ್ಣಿಗೇರಿ, ಫಕ್ಕೀರೇಶ ಮ್ಯಾಟಣ್ಣನವರ, ಕಿರಣ ನವಲೆ, ನಾರಾಯಣಸಾ ಪವಾರ, ಬಾಬಣ್ಣ ಅಳವಂಡಿ, ನೀಲಪ್ಪ ಶೆರಸೂರಿ, ರಾಮಣ್ಣ ಅಡಗಿಮನಿ, ಪ್ರಕಾಶ ಕೊಂಚಿಗೇರಿಮಠ, ಸರ್ಫರಾಜ ಸೂರಣಗಿ ಫೈಮ್ ಪಲ್ಲಿ, ಫಕ್ಕೀರೇಶ ನಂದೆಣ್ಣನವರ, ನೀಲಪ್ಪ ಪೂಜಾರ, ಶಿವಾನಂದ ಲಿಂಗಶೆಟ್ಟಿ, ನೀಲಪ್ಪ ಪಡಗೇರಿ, ಈರಣ್ಣ ಅಂಕಲಕೋಟಿ, ರಾಜು ಕಳ್ಳಿ ಸೇರಿದಂತೆ ಪಕ್ಷದ ನೂರಾರು ಕಾರ್ಯಕರ್ತರು ಇದ್ದರು.

# ಹಿರಿಯರ ಹಾರೈಕೆಯೇ ಬದುಕಿನ ಶ್ರೀರಕ್ಷೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳ ಶ್ರೇಯಸ್ಸಿಗಾಗಿ ಇಡೀ ಜೀವನವನ್ನೇ ಮುಡಿಪಾಗಿಟ್ಟ ಹೆತ್ತವರನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತಿರುವ ಕೆಟ್ಟ ಸಂಪ್ರದಾಯ ಮರೆಯಾಗಬೇಕು ಎಂದು ಹಾಸ್ಯ ಕಲಾವಿದ ಸದಾನಂದ ಕಾಳೆ ಹೇಳಿದರು.

ಅವರು ಶುಕ್ರವಾರ ಲಕ್ಷ್ಮೇಶ್ವರದ ಜಿ.ಎಫ್. ಉಪನಾಳ ಪ್ರತಿಷ್ಠಾನದ ವೃದ್ಧಾಶ್ರಮದಲ್ಲಿ ತಮ್ಮ ಮಗಳು ಅದ್ವಿಕಾಳ ಜನ್ಮ ದಿನಾಚರಣೆ ಅಂಗವಾಗಿ ವೃದ್ಧಾಶ್ರಮದ ಹಿರಿಯರಿಗೆ ಹಾಲು-ಹಣ್ಣು ವಿತರಿಸಿ ಗೌರವಿಸಿದ ಸಂದರ್ಭದಲ್ಲಿ ಮಾತನಾಡಿ, ವಿದ್ಯಾವಂತರೇ ಹೆತ್ತ ತಂದೆ-ತಾಯಿಗಳ ತ್ಯಾಗ, ಶ್ರಮಕ್ಕೆ



ಬೆಲೆ ಕೊಡದೇ ಅವರನ್ನು ವೃದ್ಧಾಶ್ರಮಕ್ಕೆ ಸೇರಿಸುತ್ತಿರುವುದು ನಮ್ಮ ಸಂಸ್ಕೃತಿ-ಸಂಸ್ಕಾರವಲ್ಲ, ಇದು ನೋವಿನ ಸಂಗತಿಯಾಗಿದೆ. ನಮ್ಮ ಶ್ರೇಯೋಭಿವೃದ್ಧಿಗೆ ಹೆತ್ತವರು, ಹಿರಿಯರು ಪ್ರತಿಯೊಬ್ಬರ ಬಾಳಿನ ಬೆಳಕಾಗಿದ್ದು, ಅವರನ್ನು ಜೋಪಾನ ಮಾಡುವುದು ಎಲ್ಲರ ಕರ್ತವ್ಯವಾಗಿದೆ. ಅವರ ಹಾರೈಕೆ ಬದುಕಿನ ಅಭಿವೃದ್ಧಿಗೆ ಆಶೀರ್ವಾದವಾಗಿದೆ ಎಂದರು.

ಈ ವೇಳೆ ವೃದ್ಧಾಶ್ರಮದ ಅಧ್ಯಕ್ಷ ಪ್ರಕಾಶ ಉಪನಾಳ, ಉಪಾಧ್ಯಕ್ಷ ದಿಗಂಬರ ಪೂಜಾರ, ಮಲ್ಲು ಕಳಸಾಪುರ, ಮಾಲಿಂಗರಾಯ ಪೂಜಾರ, ಶಿವಲಿಂಗಯ್ಯ ಹೊತಗಿಮಠ, ಸದಾನಂದ ಕಾಳೆ ಕುಟುಂಬವರ್ಗದವರು, ಹಿರಿಯರು ಇದ್ದರು.

# ಪಲ್ಸ್ ಪೋಲಿಯೊ ಜಾಗೃತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ದಡಾರ ಮತ್ತು ರುಬೆಲ್ಲಾ ನಿರ್ಮೂಲನೆಗೆ ಎಲ್ಲರೂ ಜಾಗೃತಿ ವಹಿಸಬೇಕು ಮತ್ತು ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಹೇಳಿದರು.

ಇಲ್ಲಿನ ಅಡವಿಸೋಮಾಪೂರ ಸಣ್ಣ ತಾಂಡೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೊ ಜಾಗೃತಿ ಅಭಿಯಾನದಡಿ ಪ್ರಭಾತ್‌ಫೇರಿ ಮಾಡುವ ಸಂದರ್ಭದಲ್ಲಿ ಮಾತನಾಡಿ, ಐದು ವರ್ಷದ ಒಳಗಿನ ಮಕ್ಕಳಿಗೆ ಪೋಲಿಯೊ ಹನಿ ಹಾಕಲು ರಾಷ್ಟ್ರೀಯ ಪಲ್ಸ್ ಪೋಲಿಯೊ ಮಾರ್ಚ್ 3ರಿಂದ ಗ್ರಾಮದ ಅಂಗನವಾಡಿ ಕೇಂದ್ರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಆಯೋಜಿಸಲಾಗಿದ್ದು, ಮಾರ್ಚ್ 4, 5 ಮತ್ತು 6ರವರೆಗೆ ನಡೆಯಲಿದೆ ಎಂದರು.

ಶಾಲೆಯ ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಪೋಲಿಯೊದಿಂದ ಆಗುವ ಪರಿಣಾಮದ ಬಗ್ಗೆ ಮಾಹಿತಿ ನೀಡಿದರು. ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಾರುತಿ ಪವಾರ, ಗ್ರಾ.ಪಂ ಸದಸ್ಯ ವೆಂಕಟೇಶ್ ಲಮಾಣಿ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಮೀರವ್ವ ಪವಾರ, ರೇಣುಕಾ ಲಮಾಣಿ, ಗೀತಾ ರಾಠೋಡ, ಶಾಲಾ ಮಕ್ಕಳು ಇದ್ದರು.



■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಶನಿವಾರ ನಡೆದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ತಾಲೂಕಿನ ಶಿಕ್ಷಕ ಫಕ್ಕೀರೇಶ ಡಂಬಳ ಸತತ 3ನೇ ಬಾರಿಗೆ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಸುರೇಶ್ ಹುಡೆದ, ಶ್ರೀಮತಿ ತಳವಾರ 400 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ಸಾಧಕ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ, ಕ.ರಾ.ಸ ನೌಕರರ ಸಂಘದ ಅಧ್ಯಕ್ಷ ಡಿ.ಎಚ್. ಪಾಟೀಲ್, ಎಂ.ಎ. ನದಾಫ್, ಬಸವರಾಜ ಹರ್ಲಾಪುರ, ಚಂದ್ರಕಾಂತ ನೇಕಾರ, ಎಂ.ಎಸ್. ಹಿರೇಮಠ, ಫಕ್ಕಿರೇಶ ತಳವಾರ ಹಾಗೂ ಸಮಸ್ತ ಶಿಕ್ಷಕರು ಅಭಿನಂದಿಸಿದ್ದಾರೆ.

# ಮಕ್ಕಳೆಲ್ಲರಿಗೂ ಉಜ್ವಲ ಭವಿಷ್ಯ ಕಾದಿದೆ

▶▶ಮೊದಲನೇ ಪುಟದಿಂದ

ನವೆಂಬರ್ 14ರಂದು ಮಕ್ಕಳ ದಿನಾಚರಣೆಯನ್ನು ಆಚರಿಸುತ್ತಾ ಬಂದಿದ್ದೇವೆ. ಅದೇ ರೀತಿ ಮಾರ್ಚ್ 2ರಂದು ಮಕ್ಕಳ ಹಬ್ಬವನ್ನು ಆಚರಿಸುತ್ತಿದ್ದೇವೆ. ನಮ್ಮ ದೇಶವು ಸರ್ವ ಜನಾಂಗದ ಶಾಂತಿಯ ತೋಟವಾಗಿದ್ದು, ಆ ತೋಟದಲ್ಲಿ ಅರಳುತ್ತಿರುವ ಹೂಗಳಾದ ಮಕ್ಕಳೆಲ್ಲರಿಗೂ ಉಜ್ವಲ ಭವಿಷ್ಯ ಕಾದಿದೆ. ನಮ್ಮ ದೇಶದ ಮಾನವ ಸಂಪನ್ಮೂಲವು ಅತೀ ಮುಖ್ಯವಾಗಿದೆ. ಚಂದ್ರಯಾನಕ್ಕೆ ಪ್ರಯಾಣದ ವಿಚಾರ ಮಾಡುವ ಅದ್ಭುತ ಬೆಳವಣಿಗೆಯೂ ಸಹ ಸಂತಸದ ವಿಷಯವಾಗಿದೆ. ನಮ್ಮ ದೇಶವನ್ನು ಶ್ರೀಮಂತ, ಸಂಪದ್ಭರಿತ, ಪ್ರಜ್ಞಾವಂತ, ಬುದ್ಧಿವಂತ ನಾಡನ್ನಾಗಿಸಿ ನಿಮ್ಮ ಸಂಪತ್ತಾಗಿಸುವಲ್ಲಿ ಪ್ರಯತ್ನಿಸಲಾಗುತ್ತಿದೆ ಎಂದರು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಸಿದ್ದು ಪಾಟೀಲ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಡಾ.ಕಮಲವ್ವ ಬೈಲೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ, ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಶಾಲಾ ಶಿಕ್ಷಕರು, ವಿವಿಧ ಸ್ಪರ್ಧೆಯ ನಿರ್ಣಾಯಕರು, ವಿದ್ಯಾರ್ಥಿಗಳು ಹಾಜರಿದ್ದರು.

ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು. ಎಸ್.ಎಸ್. ಗೌಡರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸಭಾ ಕಾರ್ಯಕ್ರಮದ ನಂತರ ಮಕ್ಕಳಿಗಾಗಿ ಜಾನಪದ ನೃತ್ಯ, ಕವನ ಬರೆಯುವ ಸ್ಪರ್ಧೆ, ಗಾಯನ, ಹಗ್ಗ ಜಗ್ಗಾಟ, ಲಗೋರಿ, ಚಿತ್ರಕಲೆ, ಕಥೆ ಬರೆಯುವ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳು ಜರುಗಿದವು. ಸ್ಪರ್ಧೆಗಳಲ್ಲಿ ಮಕ್ಕಳು ತಮ್ಮ ಕಲಾ ಪ್ರತಿಭೆ, ಜಾಣ್ಮೆಯನ್ನು ಪ್ರದರ್ಶಿಸಿದರು.

### ಸೂರ್ಯನಮಸ್ಕಾರ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದಲ್ಲಿ ಡಾ. ಸಂತೋಷ ಬೆಳವಡಿ

# ಸೂರ್ಯ ನಮಸ್ಕಾರ ಭಾರತೀಯ ಸಂಸ್ಕೃತಿಯ ಪ್ರತೀಕ

**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ಆಚಾರ-ವಿಚಾರ, ನಡೆ-ನುಡಿ, ಆಹಾರ-ವಿಹಾರ ಮತ್ತು ನಿತ್ಯ ಜೀವನ ಕ್ರಮಗಳು ಭಾರತೀಯ ಸಂಸ್ಕೃತಿಯ ಪ್ರತೀಕಗಳಾಗಿವೆ. ಅಂಥವುಗಳಲ್ಲಿ ಸೂರ್ಯನಮಸ್ಕಾರವೂ ಒಂದಾಗಿದೆ. ಧಾರ್ಮಿಕ ಹಿನ್ನೆಲೆಯಲ್ಲಿ ಸೂರ್ಯನಮಸ್ಕಾರವು ಸೂರ್ಯನಿಗೆ ವಂದನೆ ಸಲ್ಲಿಸುವದಾದರೆ ಆರೋಗ್ಯದ ಹಿನ್ನೆಲೆಯಲ್ಲಿ ಕೆಲವು ಆಸನಗಳನ್ನೊಳಗೊಂಡ ವ್ಯಾಯಾಮ ಪದ್ಧತಿ ಹಾಗೂ ಗರಡಿ ಸಾಧನೆಯಾಗಿದೆ. ಸೂರ್ಯನಮಸ್ಕಾರವನ್ನು ಋಷಿ-ಮುನಿಗಳು, ಯೋಗ ಸಾಧಕರು, ವ್ಯಾಯಾಮ ಪ್ರಿಯರು ಬಹು ಹಿಂದಿನಿಂದಲೂ ಆಚರಿಸುತ್ತ ಬಂದಿದ್ದಾರೆ. ಈಗಲೂ ಕೆಲವು ಶಾಲೆಗಳಲ್ಲಿ, ಗರಡಿ ಮನೆಗಳಲ್ಲಿ, ಯೋಗ ಕೇಂದ್ರಗಳಲ್ಲಿ ಸೂರ್ಯನಮಸ್ಕಾರ ಆಚರಣೆಯಲ್ಲಿದೆ. ಹೀಗಾಗಿ ಸೂರ್ಯನಮಸ್ಕಾರವು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ ಎಂದು ಡಿ.ಜಿ.ಎಂ. ಆಯುರ್ವೇದ ಕಾಲೇಜು ಪ್ರಾಚಾರ್ಯ ಡಾ. ಸಂತೋಷ ಬೆಳವಡಿ ತಿಳಿಸಿದರು.

ಶ್ರೀ ಶಿವಾನಂದ ವಿದ್ಯಾವರ್ಧಕ ಸಂಸ್ಥೆಯ ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಸ್ವಸ್ಥ ವೃತ್ತ ವಿಭಾಗ ಮತ್ತು ಶಿವಾನಂದ ಯೋಗ ಕಾಲೇಜು ಗದಗ ಇವರ ಸಂಯುಕ್ತಾಶ್ರಯದಲ್ಲಿ ರಥಸಪ್ತಮಿ ಪ್ರಯುಕ್ತ ನಡೆಸಿದ ಸೂರ್ಯನಮಸ್ಕಾರ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಬಹುಮಾನ ವಿತರಿಸಿ ಅವರು



ಮಾತನಾಡಿದರು.

ಇಂದಿನ ಯುವಜನತೆ ಮತ್ತು ಮಕ್ಕಳಲ್ಲಿ ದೈಹಿಕ ಸಾಮರ್ಥ್ಯ ಕುಂಠಿತಗೊಳ್ಳುತ್ತಲಿದೆ. ಅವರಲ್ಲಿ ದೈಹಿಕ ಶಕ್ತಿ-ಸಾಮರ್ಥ್ಯ ಹೆಚ್ಚಲು ಸೂರ್ಯನಮಸ್ಕಾರ ಸಾಧನೆಯು ಸುಲಭ ಮಾರ್ಗವಾಗಿದೆ. ಈ ಸ್ಪರ್ಧೆ ಅವರಿಗೆ ಹೆಚ್ಚಿನ ಪ್ರೇರಣೆ ನೀಡಲೆಂದು ಆಶಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಫಾರ್ಮಸಿ ಅಧಿಕಾರಿ ದತ್ತಾತ್ರೇಯ ತಿರುಮಲೆ ಮಾತನಾಡಿ, ನಾವು ಆರೋಗ್ಯದಿಂದಿರಲು ಉತ್ತಮ ಆಹಾರ ಸೇವಿಸಬೇಕು, ದುಶ್ಚಟಗಳಿಂದ ದೂರವಿದ್ದು, ನಿತ್ಯ ಸೂರ್ಯನಮಸ್ಕಾರ ವ್ಯಾಯಾಮ ಮಾಡಬೇಕೆಂದು ಸೂಚಿಸಿದರು.

ಸ್ವಸ್ಥ ವೃತ್ತಿ ವಿಭಾಗದ ಮುಖ್ಯಸ್ಥ ಡಾ. ಬೂದೇಶ ಕನಾಜ ಮತ್ತು ಶಿವಾನಂದ ಯೋಗ ಕಾಲೇಜು ಪ್ರಾಚಾರ್ಯ ಎಸ್.ಎಸ್. ಹಿರೇಮಠ ಇವರ ಮಾರ್ಗದರ್ಶನದಲ್ಲಿ ಯೋಗಪಟು ವೆಂಕಟೇಶ ಜಿತೂರಿ ಮತ್ತು ಸುನೀಲ ಹಿರೇಮಠ ಇವರು ಸೂರ್ಯನಮಸ್ಕಾರ ಸ್ಪರ್ಧೆಯ ಸಂಯೋಜಕರಾಗಿ ಹಾಗೂ ನಿತ್ಯಂ ಯೋಗ ಕೇಂದ್ರ ಸಂಚಾಲಕಿ ಸುಮಂಗಲಾ ಹದ್ಲಿ ಮತ್ತು ಗಂಗಾದರ ಕೆಂಗಾರ

ಯೋಗ ಶಿಕ್ಷಕ ಮೋಹನಸಾ ಕಬಾಡಿ ಮಾತನಾಡಿ, ಮಕ್ಕಳ ಸರ್ವಾಂಗೀಣ ಬೆಳವಣಿಗೆ ಮತ್ತು ಸಶಕ್ತ ಜನಾಂಗ ನಿರ್ಮಾಣಗೊಳ್ಳಲು ಸೂರ್ಯ ನಮಸ್ಕಾರವು ಸಹಕಾರಿಯಾಗಿದೆ ಎಂದರು. ವೇದಿಕೆಯಲ್ಲಿ ಉಪಸ್ಥಿತರಿದ್ದ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಯಾವುದೇ ಸ್ಪರ್ಧೆಗಳಿರಲಿ, ಅವು ಸ್ಪರ್ಧಾಳುಗಳಲ್ಲಿ ಹೆಚ್ಚಿನ ಪ್ರೇರಣೆ, ಪ್ರೋತ್ಸಾಹ ನೀಡುವ ಪ್ರಾಯೋಗಿಕ ಗ್ರಂಥಗಳಾಗಿವೆ. ಹೆಚ್ಚಿನ ಸಾಧನೆಗೆ ಪ್ರೇರಕಗಳಾಗಿವೆ ಎಂದು ಹೇಳಿದರು.

ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು.

ಸ್ಪರ್ಧೆಗೂ ಮುನ್ನ ಡಿ.ಜಿ.ಎಂ. ಕಾಲೇಜಿನ ನಿವೃತ್ತ ಪ್ರಾಚಾರ್ಯ ಡಾ. ಜಿ.ಬಿ. ಪಾಟೀಲರ ಸಾರಥ್ಯದಲ್ಲಿ ಸೂರ್ಯನಮಸ್ಕಾರ ಯಜ್ಞ ಕಾರ್ಯಕ್ರಮ ಜರುಗಿತು. ಸ್ಪರ್ಧೆಯ ಯಶಸ್ಸಿಗೆ ಮತ್ತು ಸ್ಪರ್ಧಿಗಳ ಪ್ರೋತ್ಸಾಹಕ್ಕಾಗಿ ಪ್ರಾ. ಉಮೇಶ ಅರಹುಣಸಿ, ಡಾ. ಅರುಣ ಸರ್ವಿ, ಅಶೋಕ ಬಾರಕೇರ ಇವರು ಬಹುಮಾನ ಸೇವೆ ಸಲ್ಲಿಸಿದರು.

ಸುನಂದಾ ಜ್ಯಾನೋಪಂತರ ಪ್ರಾರ್ಥನೆ ಹೇಳಿದರು. ಡಾ. ಬೂದೇಶ ಕನಾಜ ಸ್ವಾಗತಿಸಿದರು. ಡಾ. ಸುವರ್ಣ ನಿಡಗುಂದಿ ಕಾರ್ಯಕ್ರಮ ನಿರೂಪಿಸಿದರು. ವೆಂಕಟೇಶ ಜಿತೂರಿ ವಂದಿಸಿದರು.

# ಬೀದಿಬದಿ ವ್ಯಾಪಾರಸ್ಥರಿಗೆ ಆರ್ಥಿಕ ಸೌಲಭ್ಯ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪ್ರತಿಯೊಂದು ಮನೆಗೂ ಸಹ ಕೇಂದ್ರ ಸರಕಾರದ ಒಂದಿಲ್ಲೊಂದು ಯೋಜನೆಯನ್ನು ತಲುಪಿಸಲಾಗುತ್ತಿದೆ. ಇದೀಗ ಬೀದಿ ಬದಿ ವ್ಯಾಪಾರಸ್ಥರಿಗೂ ಸಹ ಆರ್ಥಿಕ ಸೌಲಭ್ಯವನ್ನು ಕಲ್ಪಿಸುತ್ತಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಶಿರಹಟ್ಟಿಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತಾ ಜೀವನೋಪಾಯ, ಪಟ್ಟಣ ಪಂಚಾಯತ ಶಿರಹಟ್ಟಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಪ್ರಧಾನಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮನಿರ್ಭರ ನಿಧಿ, ಪಿಎಂ ಸ್ವನಿಧಿ ಕಾರ್ಯಕ್ರಮ ಹಾಗೂ ಬೀದಿ ಬದಿ ವ್ಯಾಪಾರಸ್ಥರಿಗೆ ಮಾರಾಟ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಆಯುಷ್ಮಾನ್ ಭಾರತ ಯೋಜನೆ ಅಡಿಯಲ್ಲಿ 5 ಲಕ್ಷ ರೂ.ವರೆಗೆ ಸಹಾಯಧನ ಪಡೆಯಬಹುದಾಗಿದೆ. ಹೊಸದಾಗಿ ವಿಶ್ವಕರ್ಮ ಯೋಜನೆ ಅಡಿಯಲ್ಲಿ ಕೌಶಲ್ಯಾಧಾರಿತ ಕೆಲಸ ಮಾಡುವ ಕುಟುಂಬಗಳಿಗೂ ಸಹ ಹಂತ ಹಂತವಾಗಿ ಆರ್ಥಿಕ ಸೌಲಭ್ಯವನ್ನು ನೀಡಲಾಗುತ್ತಿದೆ. ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕು. ಜೊತೆಗೆ ಡಿಜಿಟಲ್ ವ್ಯವಹಾರ ಮಾಡಿದ ವ್ಯಾಪಾರಸ್ಥರಿಗೆ ಮಾಸಿಕವಾಗಿಯೂ ಸಹ ಸಹಾಯಧನ ಸಿಗಲಿದೆ. ಆದ್ದರಿಂದ ಹೆಚ್ಚಾಗಿ ಡಿಜಿಟಲ್ ಮೂಲದಲ್ಲಿ ವ್ಯವಹರಿಸಬೇಕೆಂದು ಹೇಳಿದರು.

ತಹಸೀಲ್ದಾರ ಅನಿಲ ಬಡಿಗೇರ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಸದಸ್ಯರಾದ ಸಂದೀಪ ಕಪ್ಪತ್ತನವರ, ಫಕ್ಕೀರೇಶ ರಟ್ಟಿಹಳ್ಳಿ, ಹೊನ್ನಪ್ಪ ಶಿರಹಟ್ಟಿ, ಇಸಾಕ ಆದ್ರಳ್ಳಿ, ಅಲ್ಲಾಭಕ್ಷಿ ನಗಾರಿ, ಶಬ್ಬೀರ ನಗಾರಿ, ಮಾಬುಸಾಬ ಲಕ್ಷ್ಮೇಶ್ವರ, ದೇವಪ್ಪ ಆಡೂರ, ನಂದಾ ಪಲ್ಲೇದ, ಎಂ.ಕೆ.ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

### ಆರ್.ಡಿ. ಕಪ್ಪಲಿಯವರು ರಚಿಸಿದ 'ಆಧ್ಯಾತ್ಮಿಕ ಲೇಖನಗಳ ಸಂಕಲನ ಭಾಗ-2' ಗ್ರಂಥ ಬಿಡುಗಡೆ


# ಹವ್ಯಾಸಕ್ಕೆ ವಯಸ್ಸಿನ ಬಂಧನವಿಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಓದು-ಬರಹಗಳಿಗೆ ಯಾವುದೇ ವಯಸ್ಸಿನ ಮಿತಿಯಿಲ್ಲ. ಅದೊಂದು ಮನಸ್ಸಿಗೆ ಸಂತೋಷ ಮತ್ತು ನೆಮ್ಮದಿಯನ್ನು ನೀಡುವ ಕ್ರಿಯೆಯಾಗಿದೆ ಎಂದು ಶಿವಶರಣೆ ಬಸಮ್ಮತಾಯಿ ನಿಡವಣಿ ನುಡಿದರು.

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ ಗದಗ ಜಿಲ್ಲಾ ಘಟಕವು ಬಸವೇಶ್ವರ ನಗರದಲ್ಲಿ ಏರ್ಪಡಿಸಿದ್ದ ಆರ್.ಡಿ. ಕಪ್ಪಲಿಯವರು ರಚಿಸಿದ 'ಆಧ್ಯಾತ್ಮಿಕ ಲೇಖನಗಳ ಸಂಕಲನ ಭಾಗ-2' ಗ್ರಂಥ ಬಿಡುಗಡೆ ಹಾಗೂ ನಿವೃತ್ತ ನೌಕರರ ಸಂಘದ ಸದಸ್ಯರ ಜನ್ಮದಿನ ಆಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

'ವಿಭೂತಿ' ಮಾಸಿಕ ಪತ್ರಿಕೆಯ ಸಂಪಾದಕ ಅಂದಾನೆಪ್ಪ ವಿಭೂತಿ ಮಾತನಾಡಿ, ಸಾಹಿತ್ಯಾಸಕ್ತಿಗೆ ಓದುವ, ಬರೆಯುವ ಹವ್ಯಾಸಕ್ಕೆ ವಯಸ್ಸಿನ ಬಂಧನವಿಲ್ಲ. ಓದು, ಬರಹ ಮನಸ್ಸಿಗೆ ಸಂತೋಷ ಮತ್ತು ನೆಮ್ಮದಿಯನ್ನು ನೀಡುವ



ಕ್ರಿಯೆ. ಹವ್ಯಾಸಿ ಲೇಖಕ ಆರ್.ಡಿ. ಕಪ್ಪಲಿಯವರು ತಮ್ಮ ಇಳಿವಯಸ್ಸಿನಲ್ಲಿ ಪುಸ್ತಕ ರಚನೆಯ ಕಾರ್ಯದಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ. ಈ ಸಂಕಲನದಲ್ಲಿ 86 ವಿವಿಧ ಲೇಖನಗಳಿದ್ದು, ಅವುಗಳು ಇಂದಿನ ಸಮಾಜ ಎದುರಿಸುತ್ತಿರುವ ಸಮಸ್ಯೆಗಳ ಚಿಂತನೆ, ಸಾಮಾಜಿಕ ಕಳಕಳಿಯನ್ನು ಹೊಂದಿವೆ. ಅವರು ರಚಿಸಿದ ಕೃತಿಗಳಲ್ಲಿ ಅವರ ಅನುಭವ ಮತ್ತು ಅನುಭಾವವಿದೆ ಎಂದರು.

ಫೆಬ್ರುವರಿ ತಿಂಗಳಲ್ಲಿ ಜನ್ಮದಿನ ಆಚರಿಸಿಕೊಂಡ ಎ.ಬಿ. ಹಿತ್ತಲಮನಿ, ಎಂ.ವ್ಹಿ. ಮಳಲಿ, ಎಂ.ಪಿ. ಜಕ್ಕಲಿ, ಬಿ.ಬಿ. ಗಿಡ್ಡನಂದಿ, ಎಂ.ಎಫ್. ಡೋಣಿ, ವ್ಹಿ.ಎ. ನರಗುಂದ, ವಿಜಯಕುಮಾರ ಸೋನಾರಿ, ಬಿ.ಡಿ. ಕಿಲಬನವರ, ಪ್ರೇಮಾ ಅಬ್ಬಿಗೇರಿ, ಭಾರತಿ ಕೋಟಿ ಮುಂತಾದವರನ್ನು ಗೌರವಿಸಿ ಶುಭಕೋರಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ಮಾತನಾಡಿ, ಮನುಷ್ಯ ಕ್ರಿಯಾಶೀಲನಾದಾಗ ಮಾತ್ರ ಕಪ್ಪಲಿಯವರಂತೆ ಎಂಬತ್ತರ ದಶಕದಲ್ಲೂ ಸಾಧನೆ ಮಾಡುವದು ಸಾಧ್ಯವಾಗುತ್ತದೆ. ಅವರ ಲೇಖನಗಳು ಓದುಗರ ಮನಸ್ಸಿಗೆ ಮುದ ನೀಡುವದರೊಂದಿಗೆ ಓದುಗನಿಗೆ ಪ್ರೇರಣೆಯನ್ನೂ ನೀಡುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಸಂಘದ ಉಪಾಧ್ಯಕ್ಷ ಜಿ.ವ್ಹಿ. ಮಳಲಿ, ಎಸ್.ಡಿ. ಗೌಡಪ್ಪಗೌಡರ, ಎಲ್.ಎಸ್. ನೀಲಗುಂದ, ಪ್ರೊ. ಎಂ.ಬಿ. ಹಳ್ಳಿ, ಎಂ.ಶಂಕರಪ್ಪ, ಎಂ.ಕೆ. ಬಡಿಗೇರ, ಎಲ್.ಎಸ್. ಲಮಾಣಿ, ಜಿ.ಎಸ್. ಸಜ್ಜನರ, ಬಿ.ಎಚ್. ಗರಡಿಮನಿ, ಐ.ಕೆ. ಮಣಕವಾಡ, ಎನ್.ಎಸ್. ಕುಲ್ಕರ್ಣಿ, ಜಿ.ಕೆ. ನಾಗರಳ್ಳಿ, ಎ.ಎನ್. ಬಸ್ತಿ, ಟಿ.ಇ.ಕಾಳೆ, ಎಸ್.ಎಸ್. ಬಿಜಲಿ, ಜಿ.ಆರ್. ಮುಜಾವರ, ಎ.ಡಿ. ಪಾಟೀಲ, ಎಸ್.ಜಿ. ಮುದಗಲ್ಲ, ಆರ್.ಡಿ. ಕಪ್ಪಲಿಯವರ ಕುಟುಂಬ ವರ್ಗದವರು, ಸಂಘದ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

ರತ್ನಾ ಗಾರ್ಫಿ ಪ್ರಾರ್ಥಿಸಿದರು. ಕೋ-ಆಪ್ ಬ್ಯಾಂಕನ ಚೇರಮನ್ ಬಿ.ಎ. ಬಿಳೆಯಲಿ ಸ್ವಾಗತಿಸಿ ಪರಿಚಯಿಸಿದರು. ಪ್ರಧಾನ ಕಾರ್ಯದರ್ಶಿ ಪ್ರೊ. ಎಂ.ಸಿ. ವಗ್ಗಿ ಕಾರ್ಯಕ್ರಮ ನಿರೂಪಿಸಿದರು. ಆರ್.ಟಿ. ನಾರಾಯಣಪೂರ ವಂದಿಸಿದರು.

### ಸರ್ಕಾರಿ ಗಂಡುಮಕ್ಕಳ ಶಾಲೆಯಲ್ಲಿ ಸರಸ್ವತಿ ಪೂಜೆ, ವಿದ್ಯಾರ್ಥಿಗಳ ಬೀಳ್ಕೊಡುಗೆ

# ಮಕ್ಕಳು ಬಿಳಿಯ ಹಾಳೆಯಿದ್ದಂತೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಕ್ಕಳಿಗೆ ಮನೆಯೇ ಮೊದಲ ಪಾಠ ಶಾಲೆ. ಹೀಗಾಗಿ, ಮಕ್ಕಳಿಗೆ ಉತ್ತಮ ಸಂಸ್ಕಾರದ ರೂಪ ನೀಡುವುದು ಪ್ರತಿಯೊಬ್ಬ ಪಾಲಕರ ಕರ್ತವ್ಯವಾಗಿದೆ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಸರಸ್ವತಿ ಪೂಜಾ ಮತ್ತು 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಬಿಳಿಯ ಹಾಳೆಯಿದ್ದಂತೆ. ಅವರಿಗೆ ಮನೆಯಲ್ಲಿ



ವಿಶೇಷವಾಗಿ ತಾಯಿ ಉತ್ತಮ ಮೌಲ್ಯಗಳನ್ನು ಕಲಿಸಿಕೊಡಬೇಕು. ಗಂಡು ಹುಟ್ಟಿದರೆ ಸಂಭ್ರಮ ಪಡುವ ಕಾಲ ಹೋಗಿ ಇಂದು ಹೆಣ್ಣು ಮನೆಯ ಕಣ್ಣು ಎಂಬಂತಾಗಿದ್ದು, ಹೆಣ್ಣು ಮಗು ಜನಿಸಿದರೆ ಸಂಭ್ರಮ ಪಡುವ ಕಾಲ ಬಂದಿದೆ. ಗಂಡು ಮಕ್ಕಳ ಬಗ್ಗೆಯೂ ಗಮನ ನೀಡಿ ಸರಿಸಮಾನವಾಗಿ ಬೆಳೆಸಿದಾಗ ಮಾತ್ರ ಕುಟುಂಬಕ್ಕೆ ಬೆಳಕಾಗುತ್ತಾರೆ ಎಂದರು.

ರಾಜೇಶ್ವರಿ ಬಡ್ನಿ ಮಾತನಾಡಿ, ಸರಕಾರಿ ಶಾಲೆಗಳು ಎಂದರೆ ಮೂಗು ಮುರಿಯುವ ಕಾಲ ದೂರವಾಗಿ ಇಂದು ಸರಕಾರಿ ಶಾಲೆಗಳಿಗೆ ನಾ ಮುಂದು, ತಾ ಮುಂದು ಎಂದು ಮಕ್ಕಳನ್ನು ದಾಖಲಾತಿ ಮಾಡುತ್ತಿರುವುದಕ್ಕೆ ನಮ್ಮ ಶಾಲೆಯೇ ಸಾಕ್ಷಿಯಾಗಿದೆ. ಸರಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕ ವರ್ಗವಿದ್ದು, ಸರಕಾರದಿಂದ ಸಾಕಷ್ಟು ಉಚಿತ ಸೌಲಭ್ಯಗಳು, ಗುಣಮಟ್ಟದ ಶಿಕ್ಷಣ ನೀಡುತ್ತವೆ. ಮಕ್ಕಳು ಪರಿಸರ ಕಾಳಜಿ, ಶಿಸ್ತು, ಸಮಯ ಪ್ರಜ್ಞೆ, ಗುರಿ ಹೊಂದಿ ಅಭ್ಯಾಸದಲ್ಲಿ ನಿರತರಾದರೆ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ವಹಿಸಿದ್ದರು. ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್.ಆರ್. ಬಂಡಿ, ಎನ್.ಎಸ್. ಪಾಟೀಲ್. ಎಂ.ಎಂ. ಮೇಗಲಮನಿ, ಮತ್ತೆಸಾಬ ನದ್ದಿಮುಲ್ಲಾ, ರಾಜೇಶ್ವರಿ ಬಡ್ನಿ, ರಮೇಶ ಮ್ಯಾಗೇರಿ, ಮಂಜುನಾಥ ಗುಲಗಂಜಿ, ಬಿ.ಎಲ್. ಜಾಧಾವ, ಎಫ್.ಆರ್. ಸಿದ್ದಿ, ನಾಗಮ್ಮಾ ಕಣವಿ, ಎಸ್‌ಡಿಎಂಸಿ ಸದಸ್ಯರು ಇದ್ದರು.

### ಶಿವಾನಂದ ಮಠದ ಉತ್ತರಾಧಿಕಾರತ್ವ ವಿವಾದ

# ಪೊಲೀಸರ ಸರ್ಪಗಾವಲಿನಲ್ಲಿ ಪ್ರಣವ ಧ್ವಜಾರೋಹಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಶಿವಾನಂದ ಮಠದ ಹಿರಿಯ ಶ್ರೀ ಹಾಗೂ ಕಿರಿಯ ಶ್ರೀಗಳ ನಡುವಿನ ಉತ್ತರಾಧಿಕಾರತ್ವದ ವಿವಾದದ ಮಧ್ಯೆಯೂ ಉಚ್ಚ ನ್ಯಾಯಾಲಯದ ಆದೇಶದಂತೆ ಉಭಯ ಶ್ರೀಗಳು ಪೊಲೀಸ್ ಸರ್ಪಗಾವಲಿನಲ್ಲಿ ಪ್ರಣವ ಧ್ವಜಾರೋಹಣ ನಡೆಸಿದರು.

ಕಳೆದೊಂದು ವರ್ಷದಿಂದ ಉಭಯ ಶ್ರೀಗಳ ಮಧ್ಯೆ ಉತ್ತರಾಧಿಕಾರತ್ವದ ಬಗ್ಗೆ ತೀವ್ರ ಜಗ್ಗಾಟ ನಡೆದಿತ್ತು. ಹಿರಿಯ ಶ್ರೀಗಳ ಕ್ರಮವನ್ನು ಕಿರಿಯ ಶ್ರೀಗಳು ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದರು. ರಾಜ್ಯ ಉಚ್ಚ ನ್ಯಾಯಾಲಯ ಮಾ.8ರಂದು ನಡೆಯುವ ಮಹಾಶಿವರಾತ್ರಿ ಸಮಾರಂಭದಲ್ಲಿ ಕಿರಿಯ ಶ್ರೀಗಳ ಹಕ್ಕಿಗೆ ಯಾವದೇ ರೀತಿ ತೊಂದರೆಯನ್ನುಂಟು



ಮಾಡುವಂತಿಲ್ಲವೆಂದು ಆದೇಶಿಸಿತ್ತು. ಆದರೆ ಮಠದ ಹಿರಿಯ ಶ್ರೀಗಳು ಮಾತ್ರ ಕಿರಿಯ ಶ್ರೀಗಳನ್ನು ಯಾವುದೇ ಕಾರ್ಯಕ್ರಮಕ್ಕೂ ಆಹ್ವಾನಿಸಿರಲಿಲ್ಲ. ಕಿರಿಯ ಶ್ರೀಗಳ ಭಕ್ತರನ್ನು ಶಿವರಾತ್ರಿ ಮಹೋತ್ಸವದ ಆಹ್ವಾನ ಪತ್ರಿಕೆಯಲ್ಲಿ ಯಾವದೇ ಪದಾಧಿಕಾರಿಯನ್ನಾಗಿಸಿರಲಿಲ್ಲ. ಇದು ಕಿರಿಯ ಶ್ರೀಗಳ ಭಕ್ತರ ಅಕ್ರೋಶಕ್ಕೆ ಕಾರಣವಾಗಿತ್ತು.

ಈ ಹಿನ್ನೆಲೆಯಲ್ಲಿ ಮಠದ ಪರಿಸರದಲ್ಲಿ ತೀವ್ರ ಉದ್ವಿಗ್ನ ಪರಿಸ್ಥಿತಿಯುಂಟಾಗಿತ್ತು. ಮಠದಲ್ಲಿ ಯಾವುದೇ ರೀತಿಯ ಅಚಾತುರ್ಯ ನಡೆಯದಂತೆ ಪೊಲೀಸರು ಸರ್ಪಗಾವಲು ಹಾಕಿದ್ದರು. ಈ ಮಧ್ಯೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಉಭಯ ಶ್ರೀಗಳ ಭಕ್ತರ ಸಭೆ ನಡೆಸಿ ನ್ಯಾಯಾಲಯದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ಯಾವುದೇ ಬಣದವರು ಆದೇಶ ಉಲ್ಲಂಘಿಸಿದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸುವದಾಗಿ ಎಚ್ಚರಿಸಿದ್ದರು.

ಈ ಹಿನ್ನೆಲೆಯಲ್ಲಿ ಶನಿವಾರ ಮುಂಜಾನೆ ಜರುಗಿದ ಪ್ರಣವ ಧ್ವಜಾರೋಹಣದಲ್ಲಿ ಶಿವಾನಂದ ಬೃಹನ್ಮಠದ ಹಿರಿಯ ಶ್ರೀ ಅಭಿನವ ಶಿವಾನಂದ ಶ್ರೀಗಳು, ಕಿರಿಯ ಶ್ರೀ ಸದಾಶಿವಾನಂದ ಭಾರತಿ ಶ್ರೀಗಳು ಹಾಗೂ ಉಭಯ ಶ್ರೀಗಳ ಭಕ್ತರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ

### ದುರ್ಗಾಸಿಂಗ್ ಕಿಸನ್‌ಸಿಂಗ್ ಜಮಾದಾರ



ಗದಗ-ಬೆಟಗೇರಿ ರಜಪೂತ ಸಮಾಜದ ಹಿರಿಯರು, ಕಾಂಗ್ರೆಸ್ ಮುಖಂಡರಾದ ದುರ್ಗಾಸಿಂಗ್ ಕಿಸನ್‌ಸಿಂಗ್ ಜಮಾದಾರ(71) ಶನಿವಾರ ಬೆಳಿಗ್ಗೆ ನಿಧನರಾದರು.

ಮೃತರ ಅಂತ್ಯಕ್ರಿಯೆ ಅದೇ ದಿನ ರಾತ್ರಿ ನೆರವೇರಿತು. ಮೃತರು ಧರ್ಮಪತ್ನಿ, ಇಬ್ಬರು ಪುತ್ರಿಯರು, ಅಳಿಯಂದಿರು ಹಾಗೂ ಅಪಾರ ಬಂದು ಬಳಗವನ್ನು ಅಗಲಿದ್ದಾರೆ. ಶ್ರೀಯುತರ ನಿಧನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್, ಮುಖಂಡರಾದ ಶಿವಪ್ಪ ಮುಳಗುಂದ, ನಾಗರತ್ನ ಶಿವಪ್ಪ ಮುಳಗುಂದ, ಗದಗ-ಬೆಟಗೇರಿ ರಜಪೂತ ಸಮಾಜ ಬಾಂಧವರು ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

# ಜನರ ವಿಶ್ವಾಸಕ್ಕೆ ಕಾಂಗ್ರೆಸ್ ಎಂದೂ ದ್ರೋಹ ಬಗೆದಿಲ್ಲ

▶▶ಮೊದಲನೇ ಪುಟದಿಂದ

ಭ್ರಷ್ಟಾಚಾರ ರಹಿತವಾಗಿ ಗ್ಯಾರಂಟಿ ಯೋಜನೆಗಳು ನೇರವಾಗಿ ಫಲಾನುಭವಿಗಳಿಗೆ ತಲುಪುವುದರ ಮೂಲಕ ಗ್ಯಾರಂಟಿ ಸಮಾವೇಶ ಸಾರ್ಥಕ ಸಮಾವೇಶವಾಗಿದೆ ಎಂದು ಕೃಷ್ಣಭೈರೇಗೌಡ ಹೇಳಿದರು.

ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳಿಗೆ ಮಹತ್ವ ಕೊಟ್ಟು, ಎರಡು ತಿಂಗಳಲ್ಲಿ ಅನುಷ್ಠಾನಗೊಳಿಸಲಾಯಿತು. ನಿಮಗೆಲ್ಲ ಅಭಿನಂದನೆ ಸಲ್ಲಿಸುವ ಕಾರ್ಯಕ್ರಮ ಇದಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ತಮ್ಮ ಕೆಲಸದ ಒತ್ತಡದ ನಡುವೆಯೂ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಕ್ಕಾಗಿ ಅಭಿನಂದನೆ ಸಲ್ಲಿಸಿದರಲ್ಲದೆ, ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಜಿಲ್ಲಾಡಳಿತಕ್ಕೆ ಧನ್ಯವಾದ ತಿಳಿಸಿದರು.

ತಾಲ್ಲೂಕಿನ ಇಟಗಿಯಲ್ಲಿ 120 ಕೋಟಿ ರೂ ವೆಚ್ಚದಲ್ಲಿ 220/10 ವಿದ್ಯುತ್ ಪರಿವರ್ತಕ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಇದರಿಂದ ಈ ಭಾಗದ ರೈತರ ವಿದ್ಯುತ್ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ. ಅಲ್ಲದೇ ಗಜೇಂದ್ರಗಡದಲ್ಲಿ 6 ಕೋಟಿ ರೂ ವೆಚ್ಚದಲ್ಲಿ ಸಾಲುಮರದ ತಿಮ್ಮಕ್ಕ ಟ್ರೀ ಪಾರ್ಕ್ ನಿರ್ಮಾಣಕ್ಕೂ ಚಾಲನೆ ದೊರೆತಿದೆ ಎಂದರು.

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ ಮಾತನಾಡಿ, ಕಳೆದ ಚುನಾವಣೆಯಲ್ಲಿ ಮತದಾರರಾದ ತಾವು ಬಹುಮತ ನೀಡಿದ್ದಿರಿ. ಆರು ತಿಂಗಳಲ್ಲಿ ಐದು ಗ್ಯಾರಂಟಿ ಯೋಜನೆ ಪರಿಣಾಮಕಾರಿ ಅನುಷ್ಠಾನ ಮಾಡಲಾಗಿದೆ. ಕ್ರಾಂತಿಕಾರ ಆರ್ಥಿಕ ಬದಲಾವಣೆಗೆ ನಮ್ಮ ಸರ್ಕಾರ ಸಾಕ್ಷಿಯಾಗಿದೆ. ಇಂತಹ ಕಾರ್ಯಕ್ರಮ ಭಾರತದಲ್ಲಿ ಎಲ್ಲಿಯೂ ಇಲ್ಲ. ದೇಶದಲ್ಲಿ ಅನ್ನಭಾಗ್ಯ ಯೋಜನೆ ಆರಂಭವಾದಾಗ 2 ರೂ.ಗೆ ಕೆ.ಜಿ ಅಕ್ಕಿ ನೀಡಲಾಗುತ್ತಿತ್ತು. ನಂತರ ಮಾಜಿ ಪ್ರಧಾನಿ ಮನಮೋಹನ ಸಿಂಗ್ ಆಹಾರ ಭದ್ರತಾ ಕಾಯ್ದೆ ಜಾರಿಮಾಡಿ, ಹಸಿವು ನೀಗಿಸಿದ್ದಾರೆ. ಅದೇ ರೀತಿ ಸಿದ್ದರಾಮಯ್ಯ ಅನ್ನ ಭಾಗ್ಯ ಜಾರಿ ಮಾಡಿ, ರಾಜ್ಯದ ಬಡವರ ಹಸಿವು ನೀಗಿಸಿ, ಹಸಿವು ಮುಕ್ತ ಕರ್ನಾಟಕ ಮಾಡಿದ್ದಾರೆ ಎಂದರು.

ವೇದಿಕೆಯಲ್ಲಿ ಕೆ.ಎಂ.ಎಫ್ ಮಾಜಿ ಅಧ್ಯಕ್ಷ ಅಸೂಟಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಎಸಿ ಡಾ. ವೆಂಕಟೇಶ ನಾಯ್ಕ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಪ್ರಶಾಂತ, ಶಶಿಕಾಂತ ಕೋಟೊಮನಿ, ತಾಲ್ಲೂಕಿನ ಅಧಿಕಾರಿಗಳಾದ ರವಿ ಎ.ಎನ್, ನಾಗರಾಜ ಕೆ, ಮೋಹನ್ ಡಿ, ಕಿರಣಕುಮಾರ ಕುಲಕರ್ಣಿ, ಎಸ್.ಎಸ್. ಬೀಳಗಿ, ರಮೇಶ್ ಗೋಂದಕರ, ಬಸವರಾಜ ಬಳಗಾನೂರ, ರಾಮಪ್ಪ ಹೊಸಮನಿ ಮುಂತಾದವರಿದ್ದರು.

ಅಧಿಕಾರಿಗಳ ಸಭೆ ನಂತರ ಪತ್ರಿಕಾಗೋಷ್ಠಿಯಲ್ಲಿ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ

# ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲು ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಕುಡಿಯುವ ನೀರಿನ ಪರಿಸ್ಥಿತಿ ಅವಲೋಕಿಸಿದ್ದು, ನೀರಿನ ಸಮಸ್ಯೆಯಿರುವ ಪ್ರದೇಶಗಳಲ್ಲಿ ಕುಡಿಯುವ ನೀರಿನ ಟ್ಯಾಂಕರ್ ಪೂರೈಸುವುದು, ಬಂದ್ ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿಗೊಳಿಸುವುದು ಸೇರಿ ನೀರಿನ ಪೂರೈಕೆಯಲ್ಲಿ ನಿಗಾ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಜಿಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಕುಡಿಯುವ ನೀರಿನ ಕುರಿತು ಸಭೆ ನಡೆಸಿ, ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಜಿಲ್ಲೆಯಲ್ಲಿ ಅಗತ್ಯವಿರುವ ನೀರಿನ ಬಗ್ಗೆ ದೀರ್ಘವಾಗಿ ಚರ್ಚೆ ಮಾಡಿದ್ದು, ಸಿಂಗಟಾಲೂರು ಬ್ಯಾರೇಜಿನಲ್ಲಿ ಒಟ್ಟು 1 ಟಿಎಂಸಿ ನೀರು ಲಭ್ಯವಿದೆ ಅದರಲ್ಲಿ 0.5 ಟಿಎಂಸಿ ಡೆಡ್ ಸ್ಟೋರೇಜ್ ಬಿಟ್ಟು 0.5 ಟಿಎಂಸಿ ನೀರನ್ನು



ಉಪಯೋಗಿಸಬಹುದಾಗಿದೆ. 0.02 ಟಿಎಂಸಿ ನೀರು ಪ್ರತಿದಿನ ಅವಶ್ಯವಿದ್ದು, ಕನಿಷ್ಠ 50 ದಿನಗಳ ವರೆಗೆ ನೀರು ಪೂರೈಕೆ ಮಾಡಬಹುದಾಗಿದೆ ಎಂದು ವಿವರಿಸಿದರು. ಕುಡಿಯುವ ನೀರು ಹೊರತುಪಡಿಸಿ ರೈತರ ಪಂಪ್‌ಸೆಟ್, ನೀರಾವರಿಗೆ ಬಳಸದೆ ಇರುವ ನಿಟ್ಟಿನಲ್ಲಿ ನೀರಾವರಿ ಇಲಾಖೆ, ಪೊಲೀಸ್ ಇಲಾಖೆ ತಂಡ ರಚಿಸಿ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿ ಅವರಿಗೆ ಸೂಚನೆ ನೀಡಲಾಗಿದೆ. ಅಲ್ಲದೇ, ಕುಡಿಯುವ ನೀರಿಗೆ ಹೊರತು ಪಡಿಸಿ ಬೇರೆಡೆ ಪೋಲಾಗದ ಹಾಗೆ ನೋಡಿಕೊಳ್ಳಲು ತಿಳಿಸಲಾಗಿದೆ ಎಂದು ಹೇಳಿದರು.

### 4-5ಲೋಡ್ ಮೇವು ಶೇಖರಣೆಗೆ ಸೂಚನೆ

ಬರಗಾಲ ಹಿನ್ನೆಲೆಯಲ್ಲಿ ಮೇವು ಸಿಗದೆ ರೈತರು ಸಂಕಷ್ಟ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಮೇವು ಬ್ಯಾಂಕ್ ಸ್ಥಾಪನೆಗೆ ಮುಂದಾಗಿದೆ. ಜಿಲ್ಲೆಯಲ್ಲಿ ಮೊದಲ ಹಂತದಲ್ಲಿ 5 ಗ್ರಾಪಂ ವ್ಯಾಪ್ತಿಯಲ್ಲಿ ಮೇವು ಬ್ಯಾಂಕ್ ತೆರೆಯಲಾಗುತ್ತಿದ್ದು, 4-5 ಟ್ರಕ್ ಲೋಡ್ ಮೇವು ಶೇಖರಣೆ ಮಾಡಲು ಸೂಚಿಸಲಾಗಿದೆ.

> ಜಿಮ್ಸ್ ಆವರಣದಲ್ಲಿ ಕ್ರಿಟಿಕಲ್ ಕೇರ್ ಬ್ಲಾಕ್ ನಿರ್ಮಾಣಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದ್ದು, 21.25 ಕೋಟಿ ರೂ. ಮೊತ್ತದ ಅನುದಾನದಲ್ಲಿ ಅದಕ್ಕೆ ಬೇಕಾಗಿರುವ ಮೋಟರೈಸ್ಡ್ ಐಸಿಯು ಬೆಡ್, ಎಮರ್ಜೆನ್ಸಿ ಬ್ಲಾಕ್, ಡಯಾಲಿಸಿಸ್ ರೂಮ್, ಆಪರೇಷನ್ ಥಿಯೇಟರ್, 24 ಬೆಡೆಡ್ ವಾರ್ಡ್ ತೆರೆಯಲು ಮಂಜೂರಾತಿ ದೊರೆತಿದ್ದು, ಕೂಡಲೇ ಟೆಂಡರ್ ಪ್ರಕ್ರಿಯೆ ಆರಂಭವಾಗಲಿದೆ.
> – ಎಚ್.ಕೆ. ಪಾಟೀಲ್, ಉಸ್ತುವಾರಿ ಸಚಿವರು.

ಗದಗ ಜಿಲ್ಲೆಯಲ್ಲಿ ಈವರೆಗೆ ಟ್ಯಾಂಕರ್ ನೀರು ಪೂರೈಕೆ ಮಾಡುವಷ್ಟರ ಮಟ್ಟಿಗೆ ಪರಿಸ್ಥಿತಿ ಬಂದಿಲ್ಲ. ಗದಗ-ಬೆಟಗೇರಿ ಅವಳಿ ನಗರದಲ್ಲಿ ಕೆಲವು ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಿರುವ ಮಾಹಿತಿ ಬಂದಿದ್ದು, ಸಹಾಯವಾಣಿ ತೆರೆಯುವ, ನೀರಿನ ಸಮಸ್ಯೆ ಇರುವ ಪ್ರದೇಶಗಳಲ್ಲಿ ತಕ್ಷಣ ಟ್ಯಾಂಕರ್ ನೀರು ಪೂರೈಕೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬೋರ್‌ವೆಲ್ ಅವಶ್ಯವಿದೆ ಎನಿಸಿದರೆ ಕೂಡಲೇ ಅಂತಹ ಸ್ಥಳಗಳಲ್ಲಿ ಕೊಳವೆಬಾವಿ ಕೊರೆಸಲು ಮಾಹಿತಿ ನೀಡಲಾಗಿದೆ ಎಂದು ಹೇಳಿದರು.

ಶುದ್ಧ ಕುಡಿಯುವ ನೀರಿನ ಕೆಲವು ಘಟಕಗಳು ಬಂದ್ ಆಗಿರುವ ಕುರಿತು ಮಾಹಿತಿ ಬಂದಿದ್ದು, ಪ್ರತಿ ತಾಲೂಕಿನ ಇಬ್ಬರು ಅಧಿಕಾರಿಗಳಂತೆ ಎಲ್ಲ ತಾಲೂಕುಗಳಲ್ಲಿನ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳು ಬಂದ್ ಆಗಿವೆ ಎಂಬುದರ ಕುರಿತು ಹತ್ತು ದಿನದೊಳಗಾಗಿ ವರದಿ ತರಿಸಿಕೊಂಡು, ದುರಸ್ತಿಗೊಳಿಸಿ, ನೀರಿನ ಸಮಸ್ಯೆ ಪರಿಹರಿಸುವ ಮೂಲಕ ಸಾರ್ವಜನಿಕರ ಬಳಕೆಗೆ ಕಲ್ಪಿಸುವಂತೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ್, ವಾರ್ತಾಧಿಕಾರಿ ವಸಂತ ಮಡ್ಲೂರ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಹಾಜರಿದ್ದರು.

### ಜಿಲ್ಲೆಯ ಅಂತರ್ಜಲ ಮಟ್ಟ

ಜಿಲ್ಲೆಯಲ್ಲಿ 2023ರ ಅಕ್ಟೋಬರ್ ತಿಂಗಳಿನಲ್ಲಿ 6.83 ಮೀಟರ್ ಅಂತರ್ಜಲ ಮಟ್ಟವಿತ್ತು. ಫೆಬ್ರವರಿ ಅಂತ್ಯದಲ್ಲಿ 13.08 ಮೀಟರ್ ಕೆಳಗಿಳಿದಿದೆ. ತಾಲೂಕುವಾರು ನೋಡುವುದಾದರೆ ಮುಂಡರಗಿ 6.90, ಗದಗ 9.53, ನರಗುಂದ 11.83, ರೋಣ 13.25, ಗಜೇಂದ್ರಗಡ 21.0, ಲಕ್ಷ್ಮೇಶ್ವರ 16.73, ಶಿರಹಟ್ಟಿ 12.8 ಮೀಟರ್‌ನಷ್ಟು ಕೆಳಗಿದೆ. ಆದ್ದರಿಂದ ಸಾರ್ವಜನಿಕರು ನೀರನ್ನು ಬಹಳ ಜಾಗೃತಿಯಿಂದ ಬಳಸಬೇಕು ಎಂದು ಮನವಿ ಮಾಡಿದರು.

# ಬಡವರ, ಸಣ್ಣ ರೈತರ ಪ್ರಕರಣಗಳ ಪರಿಹಾರಕ್ಕಾಗಿ ಮಾ. 4ರಂದು ನೂತನ ಕಾನೂನು ಜಾರಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬಡವರ, ಸಣ್ಣ ರೈತರ ಪ್ರಕರಣಗಳ ಪರಿಹಾರಕ್ಕಾಗಿ ಮಾ. 4ರಂದು ರಾಜ್ಯಾದ್ಯಂತ ನೂತನ ಕಾನೂನು ಜಾರಿಗೆ ಬರಲಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರ, ಸಣ್ಣ ರೈತರ ಪ್ರಕರಣಗಳು ಕೋರ್ಟ್‌ಗಳಲ್ಲಿ ವಿಳಂಬವಾಗದ ರೀತಿಯಲ್ಲಿ ಆದ್ಯತೆ ಮೇರೆಗೆ ಪ್ರಕರಣ ನಡೆಸುವ ಮೂಲಕ 6 ತಿಂಗಳೊಳಗಾಗಿ ಬಡವರ, ಸಣ್ಣ ರೈತರ ಪ್ರಕರಣಗಳನ್ನು ಪರಿಹರಿಸಬೇಕು ಎಂಬ ಮಸೂದೆಯನ್ನು ಜಾರಿಗೆ ತರಲಾಗಿತ್ತು.

ಮಸೂದೆಯು ವಿಧಾನ ಪರಿಷತ್ ಹಾಗೂ ವಿಧಾನಸಭೆಯಲ್ಲಿ ಪಾಸಾಗಿ ರಾಜ್ಯಪಾಲರಿಗೆ ಕಳುಹಿಸಲಾಗಿತ್ತು. ರಾಜ್ಯಪಾಲರು ರಾಷ್ಟ್ರಪತಿಗಳ ಅಂಕಿತಕ್ಕೆ ಕಳುಹಿಸಿದ್ದರು. ಫೆ. 18ರಂದು ರಾಷ್ಟ್ರಪತಿಗಳು ಮಸೂದೆಗೆ ಅಂಕಿತ ಹಾಕಿದ್ದು, ಸರಕಾರ ರಾಜ್ಯಪತ್ರದಲ್ಲಿ ಫೆ. 29ರಂದು ಮಸೂದೆ ಜಾರಿಗೆ ಬರುವಂತೆ ಗೆಜೆಟ್ ನೋಟಿಫಿಕೇಶನ್ ಜಾರಿ ಮಾಡಿದೆ.

ಮಾ. 4ರಿಂದ ಈ ಕಾನೂನು ಜಾರಿಗೆ ಬರಲಿದೆ. ಈ ಕಾನೂನು ರಾಜ್ಯದಲ್ಲಿಯೇ ಬಡವರಿಗೆ ನ್ಯಾಯಾಲಯದ ವಿಶೇಷ ಆದ್ಯತೆ ನೀಡುವ ಮೊದಲ ಕಾನೂನು ಆಗಿದೆ ಎಂದು ಕಾನೂನು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಪುರಸಭೆ ಪ್ರಭಾರಿ ಮುಖ್ಯಾಧಿಕಾರಿಯಿಂದ 6.66 ಕೋಟಿ ರೂ ಉಳಿತಾಯ ಬಜೆಟ್ ಮಂಡನೆ

# ತೆರಿಗೆ ಪಾವತಿಸದ ಘಟಕಗಳನ್ನು ಬಂದ್ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪುರಸಭೆ ಸಭಾ ಭವನದಲ್ಲಿ ಶುಕ್ರವಾರ ನಡೆದ 2024-25ನೇ ಸಾಲಿನ ಸಭೆಯಲ್ಲಿ ರೂ.6 ಕೋಟಿ 66 ಲಕ್ಷ ವೆಚ್ಚದ ಉಳಿತಾಯದ ಬಜೆಟ್ ಸಿದ್ಧಪಡಿಸಲಾಗಿದೆ ಎಂದು ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಹೇಳಿದರು.

ಪಟ್ಟಣದ ಪುರಸಭೆ 2024-25ನೇ ಸಾಲಿನಲ್ಲಿ ಆಸ್ತಿ ತೆರಿಗೆಯಿಂದ ರೂ. 1 ಕೋಟಿ 89 ಲಕ್ಷ, ನೀರಿನ ಕರ ರೂ. 84 ಲಕ್ಷ, ವ್ಯಾಪಾರ ಪರವಾನಿಗೆ ರೂ. 8 ಲಕ್ಷ, ಮಳಿಗೆಗಳ ಬಾಡಿಗೆಯಿಂದ ರೂ. 12 ಲಕ್ಷ 60 ಸಾವಿರ, ಕಟ್ಟಡ ಪರವಾನಿಗೆಯಿಂದ ರೂ.15 ಲಕ್ಷ 70 ಸಾವಿರ ಹಾಗೂ ಖಾತಾ ಬದಲಾವಣೆಯಿಂದ ರೂ. 26 ಲಕ್ಷ 25 ಸಾವಿರ ಸೇರಿ ಇತರೆ ಮೂಲಗಳಿಂದ ಅಂದಾಜು ರೂ. 26 ಲಕ್ಷ 25 ಸಾವಿರ ನಿರೀಕ್ಷೆಯೊಂದಿಗೆ ಪುರಸಭೆ ಪ್ರಭಾರಿ ಮುಖ್ಯಾಧಿಖಾರಿ ಬಸವರಾಜ ಬಳಗಾನೂರ




ಅಂದಾಜು ರೂ. 6 ಕೋಟಿ 66 ಲಕ್ಷ ವೆಚ್ಚದ ಉಳಿತಾಯ ಬಜೆಟ್‌ನ್ನು ಮಂಡಿಸಿದರು.

2024-25ನೇ ಸಾಲಿನ ಆಯವ್ಯಯ ಸಭೆಯಲ್ಲಿ ಪಟ್ಟಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತ ಚರ್ಚೆಯ ವೇಳೆ, ಪುರಸಭೆ ಅಧಿಕಾರಿಗಳು ಕೆಲ ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಗಳಿಂದ ಪುರಸಭೆಗೆ 2-3 ವರ್ಷಗಳಿಂದ ತೆರಿಗೆ ತುಂಬಿಲ್ಲ ಎಂದು ಸ್ಥಾಯಿ ಸಮಿತಿ ಚೇರಮನ್ ಕನಕಪ್ಪ ಅರಳಿಗಿಡದ ಪ್ರಸ್ತಾಪಿಸುತ್ತಿದಂತೆ ಅಧಿಕಾರಿಗಳು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲ ಎಂದು ಕೆಲ ಸದಸ್ಯರು ಅಧಿಕಾರಿಗಳನ್ನು ತರಾಟೆಗೆ ತಗೆದುಕೊಂಡರು.

ಪುರಸಭೆ ರಾಘವೇಂದ್ರ ಮಂತಾ, ಜನರಿಗೆ ತೊಂದರೆ ಆಗುತ್ತದೆ ಎಂದು ಬಂದ್ ಮಾಡಿಲ್ಲ ಎಂದರು. ಇದಕ್ಕೆ ಆಕ್ಷೇಪಿಸಿದ ಪುರಸಭೆ ಸದಸ್ಯ ಶಿವರಾಜ ಘೋರ್ಪಡೆ, ಪಟ್ಟಣದಲ್ಲಿನ ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಳಿಂದ ಜನತೆಗೆ ಉಚಿತವಾಗಿ ಅಥವಾ ರಿಯಾಯತಿ ದರದಲ್ಲಿ ನೀರನ್ನು ಪೂರೈಸುತ್ತಿಲ್ಲ. ನೀರು ಮಾರಟವನ್ನು ವ್ಯಾಪಾರ ಮಾಡಿಕೊಂಡಿದ್ದಾರೆ. ತೆರಿಗೆ ತುಂಬದ ಘಟಕಗಳಿಗೆ ತೆರಿಗೆ ತುಂಬಲು ಕಾಲಾವಕಾಶದ ನೋಟಿಸ್ ನೀಡಿ, ನಿಗದಿತ ಸಮಯದಲ್ಲಿ ಪುರಸಭೆಗೆ ಬಾಕಿ ಉಳಿಸಿಕೊಂಡಿರುವ ತೆರಿಗೆ ಭರಣ ಮಾಡದ ಘಟಕಗಳನ್ನು ಮುಲಾಜಿಲ್ಲದೆ ಬಂದ್ ಮಾಡಿ. ನಮ್ಮಲ್ಲಿ ಯಾರೊಬ್ಬ ಸದಸ್ಯರು ತೆರಿಗೆ ತುಂಬದ ಘಟಕಗಳನ್ನು ಬಂದ್ ಮಾಡದಂತೆ ಹೇಳಿದರೆ ಇನ್ನುಳಿದ ಸದಸ್ಯರ ಗಮನಕ್ಕೆ ತರುವಂತೆ ತಿಳಿಸಿದರು.

ಈ ವೇಳೆ ಪುರಸಭೆ ನಾಮನಿರ್ದೇಶಿತ ಸದಸ್ಯರಾಗಿ ನೇಮಕವಾದ ಬಸವರಾಜ ಹೂಗಾರ, ಉಮೇಶ ರಾಠೋಡ, ಮುತ್ತಣ್ಣ ಮ್ಯಾಗೇರಿ, ರಫೀಕ್ ತೋರಗಲ್ ಹಾಗೂ ಸುಮಂಗಲಾ ಇಟಗಿ ಅವರನ್ನು ಸ್ವಾಗತಿಸಲಾಯಿತು.

ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ್, ಸದಸ್ಯರಾದ ರಾಜು ಸಾಂಗ್ಲೀಕರ, ಮುದಿಯಪ್ಪ ಮುಧೋಳ, ಯು.ಆರ್. ಚನ್ನಮ್ಮನವರ, ಯಮನೂರ್ ತಿರಕೋಜಿ, ವಿಜಯಾ ಮಳಗಿ, ದ್ರಾಕ್ಷಾಯಿಣಿ ಚೋಳಿನ ಇದ್ದರು.

> ಪಟ್ಟಣದ ಪುರಸಭೆಯಲ್ಲಿನ ಸಿಬ್ಬಂದಿಗಳು ಪುರಸಭೆ ಸದಸ್ಯರ ಮಾತಿಗೆ ಕಿಮ್ಮತ್ತು ನೀಡುವದಿಲ್ಲ. ಅದೇ ಏಜೆಂಟರು ಬಂದರೆ ಅವರಿಗೆ ಇನ್ನಿಲ್ಲದ ಗೌರವ ನೀಡುತ್ತಾರೆ. ಪುರಸಭೆಯಲ್ಲಿ ಸದಸ್ಯರಿಗಿಂತ ಏಜೆಂಟ್‌ರಿಗೆ ಹೆಚ್ಚು ಬೆಲೆ. ನಾವು ಹೇಳಿದ ಕೆಲಸಗಳು ವಾರ ಕಳೆದರೂ ಸಹ ಆಗುವದಿಲ್ಲ, ಏಜೆಂಟರ್ ಮಧ್ಯಾಹ್ನ ಹೇಳಿದರೆ ಸಂಜೆ ಆಗಿರುತ್ತದೆ. ಇದಕ್ಕೆ ಕಡಿವಾಣ ಹಾಕಲು ಕ್ರಮವನ್ನು ಕೈಗೊಳ್ಳಿ ಎಂದು ಪ್ರಭಾರಿ ಮುಖ್ಯಾಧಿಕಾರಿಗೆ ಒತ್ತಾಯಿಸಿದರು.

## ವಕ್ಫ ಸಲಹಾ ಸಮಿತಿ ಅಧ್ಯಕ್ಷರ ಭೇಟಿ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ವಕ್ಫ ಸಲಹಾ ಸಮಿತಿಯ ಜಿಲ್ಲಾಧ್ಯಕ್ಷ ಜಿ.ಎಮ್. ದಂಡಿನ ಗದಗ ತಾಲೂಕಿನ ಕುರ್ತಕೋಟಿ, ಅಸುಂಡಿ, ಚಿಂಚಲಿ ಹಾಗೂ ಮುಳಗುಂದ ಪಟ್ಟಣದ ವಿವಿಧ ವಕ್ಫ ಸಂಸ್ಥೆಗಳಿಗೆ ಮಾ.3ರಂದು ಭೇಟಿ ನೀಡುವರು. ಈ ಸಂದರ್ಭದಲ್ಲಿ ವಕ್ಫ ಸಂಸ್ಥೆಗಳ ವಿವಿಧ ಸಮಸ್ಯೆಗಳನ್ನು ಆಲಿಸಲಿದ್ದಾರೆ ಎಂದು ಗದಗ ಜಿಲ್ಲಾ ವಕ್ಫ ಸಲಹಾ ಸಮಿತಿಯ ಪ್ರಕಟಣೆ ತಿಳಿಸಿದೆ.

## ಸ್ಫೋಟ ಪ್ರಕರಣದ ತನಿಖೆಯಲ್ಲಿ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಿ: ಸಿಎಂ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಉಪಾಹಾರ ಗೃಹದಲ್ಲಿ ಸಂಭವಿಸಿದ ಕಡಿಮೆ ತೀವ್ರತೆಯ ಸ್ಫೋಟ ಪ್ರಕರಣದ ತನಿಖೆಯಲ್ಲಿ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಂತೆ ಮತ್ತು ಘಟನೆಯ "ಸಂಪೂರ್ಣ ಸತ್ಯ" ಹೊರಬರುವಂತೆ ನೋಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಶನಿವಾರ ಸೂಚನೆ ನೀಡಿದ್ದಾರೆ.

ಸಚಿವ ಜಿ.ಪರಮೇಶ್ವರ ಅವರ ಸಮ್ಮುಖದಲ್ಲಿ ಗೃಹ ಇಲಾಖೆ ಉನ್ನತಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಸಮಾಜಘಾತುಕ ಶಕ್ತಿಗಳ ವಿರುದ್ಧ ಯಾವುದೇ ಅನುಕಂಪವಿಲ್ಲದೆ ಕ್ರಮ ಕೈಗೊಳ್ಳುವಂತೆ ಸಿಎಂ ಸಿದ್ದರಾಮಯ್ಯ ಸೂಚಿಸಿದ್ದಾರೆ. ಜನನಿಬಿಡ ಸ್ಥಳಗಳನ್ನು ಗುರುತಿಸಿ, ಅಂತಹ ಪ್ರದೇಶಗಳಲ್ಲಿ ಪೊಲೀಸ್ ಗಸ್ತು ಹೆಚ್ಚಿಸಿ, ಜನರಿಗೆ ಭದ್ರತೆ ಒದಗಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ತಮ್ಮ ಕಚೇರಿಯಿಂದ ಹೊರಡಿಸಿದ ಪ್ರಕಟಣೆಯಲ್ಲಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಶ್ರೀ ವಿವೇಕಾನಂದ ವಿದ್ಯಾಲಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 'ವಿವೇಕೋತ್ಸವ' ಕಾರ್ಯಕ್ರಮ

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪ್ರಸ್ತುತ ದಿನಮಾನದಲ್ಲಿ ಶಿಕ್ಷಣವು ಉತ್ತಮ ಭವಿಷ್ಯವನ್ನು ಕಂಡುಕೊಳ್ಳುವುದಕ್ಕೆ ಭದ್ರ ಬುನಾದಿಯಾಗಿದೆ. ಪೋಷಕರು ತಮ್ಮ ಜಮೀನುಗಳನ್ನು ಮಾರಾಟ ಮಾಡಿದರೂ ಚಿಂತೆಯಿಲ್ಲ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ಕಲ್ಪಿಸಬೇಕೆಂದು ಹೂವಿನಶಿಗ್ಲಿಯ ಚನ್ನವೀರ ಸ್ವಾಮೀಜಿ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ವಿವೇಕಾನಂದ ವಿದ್ಯಾಲಯ ಹಿರಿಯ ಪ್ರಾಥಮಿಕ ಶಾಲೆಯ ವಿವೇಕೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಗುಣಮಟ್ಟದ ಶಿಕ್ಷಣ ದೊರೆತ ನಂತರ ಮಕ್ಕಳು ಒಳ್ಳೆಯ ಉದ್ಯೋಗವನ್ನು ಪಡೆದುಕೊಂಡು ಮುಂದೆ ನಿಮಗೆ ಆಶ್ರಯದಾತರಾಗಲು ಸಹಾಯ ವಾಗುತ್ತದೆ. ವಿದ್ಯಾರ್ಥಿಗಳಾದವರೂ ಸಹ ಪಾಲಕರು ನಿಮ್ಮ ಬಗ್ಗೆ ಸಾವಿರಾರು ಕನಸುಗಳನ್ನು ಕಂಡಿರುತ್ತಾರೆ. ಅವುಗಳನ್ನು ನನಸಾಗಿಸಿ, ಎಲ್ಲ ದಾನಕ್ಕಿಂತ ಶ್ರೇಷ್ಠದಾನ ವಿದ್ಯಾದಾನವಾಗಿದೆ.

ಇದನ್ನು ಬೆಳ್ಳಟ್ಟಿಯಲ್ಲಿ ಶಿವಪ್ರಕಾಶ ಮಹಾಜನಶೆಟ್ಟರ ತಮ್ಮ ಸಂಸ್ಥೆಯ ಮೂಲಕ ಗ್ರಾಮೀಣ ಭಾಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಕಲ್ಪಿಸುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಉದ್ಘಾಟನೆ ನೆರವೇರಿಸಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಪ್ರಸ್ತುತ ದಿನಗಳಲ್ಲಿ ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಸಿಲುಕಿದ್ದಾರೆ. ಆ ಹೊರೆಯನ್ನು ಪಾಲಕರು ಕಡಿಮೆ ಮಾಡಬೇಕು. ಶಿಕ್ಷಣದ ಜೊತೆಗೆ ಮಕ್ಕಳಿಗೆ ಉತ್ತಮ ಸಂಸ್ಕಾರವನ್ನು ಸಹ ನೀಡುವುದು ಅವಶ್ಯವಿದೆ. ಒಳ್ಳೆಯ ಉದ್ಯೋಗದಲ್ಲಿರುವ ನೌಕರಸ್ಥರ ತಂದೆ-ತಾಯಿಗಳು ವೃದ್ಧಾಶ್ರಮಗಳಲ್ಲಿ ಇರು ವುದನ್ನು ಕಾಣುತ್ತಿದ್ದೇವೆ. ಇದು ವಿಷಾದದ ಸಂಗತಿ. ಹಿರಿಯರನ್ನು ಗೌರವದಿಂದ ಕಂಡು, ಸಂಬಂಧಿಕರೊಡನೆ ಉತ್ತಮ ಬಾಂಧವ್ಯವನ್ನು ಹೊಂದಬೇಕೆಂದು ಹೇಳಿದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಕೆ.ಎ. ಬಳಿಗೇರ ಮಾತನಾಡಿದರು. ಸಾವಿರಾರು ಸಂಖ್ಯೆಯಲ್ಲಿ ಪಾಲಕರು, ಸಂಬಂಧಿಕರು ಕಾರ್ಯಕ್ರಮದಲ್ಲಿ ಭಾಗಿಯಾಗಿ ತಮ್ಮ ಮಕ್ಕಳ ಪ್ರತಿಭೆಯನ್ನು ವೀಕ್ಷಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ, ಚಂದ್ರಕಾಂತ ನೂರಶೆಟ್ಟರ, ಎನ್.ಎನ್. ಗೋಕಾವಿ, ಜಿ.ಕೆ. ಬೆಲಹುಣಸಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಶಂಕರ ಮರಾಠೆ, ಗಿರೀಶ ಕೊಡಬಾಳ, ಎಂ.ಬಿ. ಹಾವೇರಿ, ಮಂಜುನಾಥ ಅಂಗಡಿ, ಮುತ್ತು ಅಳವಂಡಿ, ಎಂ.ಸಿ. ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

> ಸಂಸ್ಥೆಯ ಅಧ್ಯಕ್ಷ ಶಿವಪ್ರಕಾಶ ಮಹಾಜನಶೆಟ್ಟರ ಮಾತನಾಡಿ, ಬೆಳ್ಳಟ್ಟಿಯೂ ಸೇರಿದಂತೆ ಈ ಭಾಗದಲ್ಲಿಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವುದಕ್ಕಾಗಿ ನುರಿತ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡು ಇಲಾಖೆಯ ಮಾರ್ಗದರ್ಶನದಂತೆ ಶಿಕ್ಷಣವನ್ನು ನೀಡುವುದರ ಜೊತೆ-ಗೆ ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ, ಕ್ರೀಡೆ ಮತ್ತು ಉತ್ತಮ ಸಂಸ್ಕಾರವಂತರಾಗಿ ಹೊರಹೊಮ್ಮುವುದಕ್ಕೆ ತಜ್ಞರನ್ನು ಕರೆಯಿಸಿ ಮಕ್ಕಳಿಗೆ ಬೋಧನೆ ಮಾಡಲಾಗುತ್ತಿದೆ ಎಂದರು.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗೆ ಮಾರ್ಚ್ 7 ಕೊನೆಯ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಖಾಲಿ ಇರುವ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ವಿವಿಧ ವೃಂದದ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಗದಗನಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು, ಸದರಿ ಹುದ್ದೆಗಳ ನೇರ ಸಂದರ್ಶನ/ಮೂಲ ದಾಖಲಾತಿ ಪರಿಶೀಲನೆಯನ್ನು ಸಹ ಹಮ್ಮಿಕೊಳ್ಳಲಾಗಿತ್ತು, ಸದರಿ ಹುದ್ದೆಗಳಿಗೆ ರೋಷ್ಟರ್ ಮತ್ತು ಮೇರಿಟ್ ಆಧಾರದ ಮೇಲೆ ತಯಾರಿಸಿದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಗದಗ ಇವರ ಸೂಚನಾ ಫಲಕದಲ್ಲಿ ಲಗತ್ತಿಸಿದ್ದು, ಸದರಿ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ರಜಾ ದಿನಗಳನ್ನು ಹೊರತು ಪಡಿಸಿ ಮಾರ್ಚ್ 7 ರ ಸಂಜೆ 4 ಗಂಟೆಯೊಳಗೆ ಕಚೇರಿ ಸಮಯದಲ್ಲಿ ಲಿಖಿತ ರೂಪದಲ್ಲಿ ಸಲ್ಲಿಸಲು ಸೂಚಿಸಿದೆ. ಹಾಗೂ ಯಾವುದೇ ಆಕ್ಷೇಪಣೆ ಬಾರದೆ ಇದ್ದಲ್ಲಿ ಇದೇ ಪಟ್ಟಿಯನ್ನು ಅಂತಿಮ ಅಭ್ಯರ್ಥಿಗಳ ಆಯ್ಕೆ ಪಟ್ಟಿ ಎಂದು ಪರಿಗಣಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

### ಕಂದಾಯ ಇಲಾಖೆ

**ಭೂಸ್ವಾಧೀನ ಕಾಯ್ದೆಯ ಕಲಂ 19(1) ರೊಂದಿಗೆ ಓದಲಾದ ಪ್ರಕರಣ 19(2) ರ ಅನ್ವಯ ಘೋಷಣೆ**

ಸಂಖ್ಯೆ:ಕಂಇ 07 ಎಕ್ಯೂಡಿ 2023 ದಿನಾಂಕ:-09-11-2023

ಗದಗ-ಹೂಟಗಿ ರೈಲು ದ್ವಿಮಾರ್ಗ ಯೋಜನೆಗಾಗಿ ಗದಗ ಜಿಲ್ಲೆ ಗದಗ ತಾಲೂಕಿನ ಗದಗ ಗ್ರಾಮದ ಈ ಕೆಳಗಿನ ಅನುಸೂಚಿಯಲ್ಲಿ ಕಾಣಿಸಿರುವ ಜಮೀನುಗಳ ಸ್ವಾಧೀನತೆಯ ಅವಶಕತೆ ಕಂಡು ಬಂದಿದ್ದರಿಂದ ಹಾಗೂ ಈ ಯೋಜನೆಗೆ ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ್ ನಿರ್ಮಾಣ ಕಾಯ್ದೆ-2013 (2013 ಕೇಂದ್ರ ಅಧಿನಿಯಮ ಸಂಖೆ:30) ಕ್ಕೆ ಅನುಗುಣವಾಗಿ ಕರ್ನಾಟಕ ರಾಜ್ಯಕ್ಕೆ ಅನ್ವಯಸುವಂತೆ ದಿನಾಂಕ:23-07-2019 ರಿಂದ ಜಾರಿಗೆ ಬಂದಿರುವ ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರ್ದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ ನಿರ್ಮಾಣ (ಕರ್ನಾಟಕ ತಿದ್ದುಪಡಿ) ಕಾಯ್ದೆ-2019 (2019 ರ ಕರ್ನಾಟಕ ಅಧಿನಿಯಮ ಸಂಖ್ಯೆ:16) ರ ಕಲಂ (ಎ) ರಡಿ ಮೂಲ ಕಾಯ್ದೆಯ ಅಧ್ಯಾಯ-II & III ರಲ್ಲಿನ ಉಪಬಂಧಗಳನ್ನು ಅನ್ವಯಿಸುವುದರಿಂದ ವಿನಾಯಿತಿ ನೀಡಿ, ಸಂಖ್ಯೆ:ಕಂಇ 20 ಎಕ್ಯೂಡಿ 2022, ದಿನಾಂಕ: 03-09-2022 ಸರ್ಕಾರದ ಅಧಿಸೂಚನೆಯನ್ನು ಹೊರಡಿಸಿದ್ದರ ಮೇರೆಗೆ 2013 ರ ಮೂಲ ಕಾಯ್ದೆಯ ಕಲಂ 11(1) ರಡಿ ಕ್ರಮಾಂಕ:ಎಲ್‌ಎಕ್ಯೂ/ಸಿಆರ್/06/2022-23 ದಿನಾಂಕ:20-10-2022 ರಲ್ಲಿ ಅಧಿಸೂಚನೆ ದಿನಾಂಕ:29-10-2022 ರಂದು ರಾಜ್ಯ ಪತ್ರದಲ್ಲಿ ಪ್ರಕಟಿಸಿದಂತೆ ಕಲಂ 15(1) ರನ್ವಯ ಆಕ್ಷೇಪಣೆಗಳು ಸ್ವೀಕೃತವಾಗದೇ ಇರುವುದರಿಂದ/ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಆಲಿಸಿದ ನಂತರ ಹಾಗೂ ಸೂಕ್ತ ವಿಚಾರಣಾ ವರದಿಯನ್ನು ನಡೆಸಿದ ನಂತರ ವಿಚಾರಣಾ ವರದಿಯನ್ನು ಸರ್ಕಾರದ ಪತ್ರ ಸಂಖ್ಯೆ:ಕಂಇ 07 ಎಕ್ಯೂಡಿ 2022 ದಿನಾಂಕ:27-07-2023 ರಲ್ಲಿ ಒಪ್ಪಿ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿದೆ.

ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರ್ದರ್ಶಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಹಾಗೂ ಪುನರ ನಿರ್ಮಾಣ ಕಾಯ್ದೆ-2013 ರ ಕಲಂ 19(1) ರಡಿ ಕೆಳಗೆ ಸೂಚಿಸಿರುವ ಜಮೀನುಗಳನ್ನು ಸ್ವಾಧೀನಪಡಿಸಿಕೊಳವುದು ಅಗತ್ಯವಿದೆ ಎಂದು ಕರ್ನಾಟಕ ಸರ್ಕಾರಕ್ಕೆ ಮನದಟ್ಟಾಗಿರುವದರಿಂದ, ಮೇಲೆ ತಿಳಿಸಿದ ಉದ್ದೇಶಕ್ಕಾಗಿ ಜಮೀನುಗಳು ಅಗತ್ಯವಾಗಿದೆ ಎಂದು ಸದರಿ ಅಧಿನಿಯಮ 19(1) ನೇ ಪ್ರಕರಣದ ಮೇರೆಗೆ ಈ ಮೂಲಕ ಘೋಷಿಸಲಾಗಿದೆ.

ಅದರಂತೆ ಸದರಿ ಭೂಸ್ವಾಧೀನ ನಿಯಮ 3ನೇ ಪ್ರಕರಣದ (ಜಿ) ಖಂಡದ ಮೇರೆಗೆ ಉಪ-ವಿಭಾಗಾಧಿಕಾರಿಗಳು ಗದಗ ಉಪ-ವಿಭಾಗ, ಗದಗ ಇವರನ್ನು ಸದರಿ ಜಮೀನುಗಳ ಸ್ವಾಧೀನತೆಯ ಮುಂದಿನ ಎಲ್ಲಾ ಕಾನೂನು ಕ್ರಮ ಮತ್ತು ಪ್ರಕ್ರಿಯೆಗಳ ಕುರಿತಂತೆ ಜಿಲ್ಲಾಧಿಕಾರಿಯವರ ಪ್ರಕಾರ್ಯವನ್ನು ನಿರ್ವಹಿಸುವ ಸಲುವಾಗಿ ಈ ಮೂಲಕ ನೇಮಕ ಮಾಡಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 04 ಎಕ್ಯೂಬಿ 2022 ದಿನಾಂಕ: 28-03-2022 ರನ್ವಯ ಸದರಿ ಯೋಜನೆಗೆ 2013 ರ ಮೂಲ ಕಾಯ್ದೆಯ ಅಧ್ಯಾಯ-II & III ರಲ್ಲಿನ ಉಪಬಂಧಗಳನ್ನು ಅನ್ವಯಿಸುವುದರಿಂದ ವಿನಾಯಿತಿ ನೀಡಲಾಗಿರುವುದರಿಂದ 2013 ರ ಮೂಲ ಕಾಯ್ದೆಯ ಅಧ್ಯಾಯ-II & III ರಲ್ಲಿನ ಪುನರ್‌ವಸತಿ ಮತ್ತು ಪುನರ್ ನಿರ್ಮಾಣದ ಅವಕಾಶಗಳ ಬದಲಾಗಿ ನೀಡಲಾಗುವ ಒಂದು ಇಡಿಗಂಟು ಮೊತ್ತವನ್ನು ಭೂಸ್ವಾಧೀನತೆ ಪ್ರಕ್ರಿಯೇಯಲ್ಲಿ ಪಾರದಶಿಕತೆ ಮತ್ತು ಸೂಕ್ತ ಪರಿಹಾರ ಹಕ್ಕು, ಪುನರ್ವಶಸತಿ ಹಾಗೂ ಪುನರ್ ನಿರ್ಮಾಣ (ಕರ್ನಾಟಕ ತಿದ್ದುಪಡಿ) ನಿಯಮಗಳು-2020 ರ ನಿಯಮ 29(5) ನಿಗಧಿಪಡಿಸಲು ತೀರ್ಮಾನಿಸಲಾಗಿದೆ.

ಈ ಮೇಲಿನ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ ಸದರಿ ಅಧಿನಿಯಮದ ಕಲಂ-21(1) ರಡಿ ಸಂಬಂಧಿಸಿದ ಹಿತಾಸಕ್ತಿದಾರರಿಗೆ ಭೂಸ್ವಾಧೀನತೆಯ ಜಮೀನುಗಳ ಕಬ್ಜಾ ಪಡೆಯುವ ಉದ್ದೇಶದ ಬಗ್ಗೆ ಹಾಗೂ ಪರಿಹಾರದ ಕ್ಲೇಮುಗಳನ್ನು ಸಲ್ಲಿಸಲು ತಿಳುವಳಿಕೆಯ ನೋಟಿಸ್ ನೀಡಿ ಮುಂದಿನ ಕ್ರಮ ಜರುಗಿಸಲು ನಿರ್ದೇಶಿಸಿದೆ.

ಸದರಿ ಅಧಿಸೂಚನೆಯಲ್ಲಿ ಒಳಪಡುವ ಜಮೀನುಗಳ ವಿವರವನ್ನು ಸೂಚಿಸುವ ಒಂದು ನಕಾಶೆಯನ್ನು ಸಾರ್ವಜನಿಕ ಹಿತಾಸಕ್ತಿದಾರರ ಅವಗಾಹನೆಗಾಗಿ ಭೂಸ್ವಾಧೀನಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಗದಗ ಇವರ ಕಾರ್ಯಾಲಯದಲ್ಲಿ ಪರಿಶೀಲನೆಗೆ ಇಡಲಾಗಿದೆ.

**ಅನುಸೂಚಿ**

(ಕ್ರ.ಎಲ್‌ಎಕ್ಯೂ/ಎಸ್.ಆರ್/ 03 /2022-23)

ಜಿಲ್ಲೆ : ಗದಗ ತಾಲೂಕು : ಗದಗ ಹೋಬಳಿ: ಗದಗ ಗ್ರಾಮ : ಗದಗ

| ಕ್ರ. ಸಂ | ಖಾತೆದಾರರ / ಅನುಭವದಾರರ ಹೆಸರು (ಜೆ.ಎಂ.ಸಿ ರನ್ವಯ) | ಸರ್ವೆ ಖಾತಾ ನಂಬರ್ | ಹಿಸ್ಸಾ ನಂ | ಸ್ವಾಧೀನಕ್ಕೊಳಪಡುವ ಒಟ್ಟು ಕ್ಷೇತ್ರ (ಕಲಂ 11 (1) ರನ್ವಯ) | | ತರಹೆ | ಸ್ವಾಧೀನಕ್ಕೊಳ ಪಡುವ ಒಟ್ಟು ಕ್ಷೇತ್ರ | | ತರಹೆ | ಸರಹದ್ದು | | | | ಮರ (ಮಾಲ್ಕಿ) ಗಳ ವಿವರ | ಷರಾ |
|---|---|---|---|---|---|---|---|---|---|---|---|---|---|---|---|
| | | | | ಕೃಷಿ | ಖರಾಬು | | ಕೃಷಿ | ಖರಾಬು | | ಪೂ | ಪ | ಉ | ದ | | |
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 |
| 1)<br>2)<br>3)<br>4)<br>5)<br>6)<br>7)<br>8)<br>9)<br>10)<br>11)<br>12)<br>13)<br>14) | ಬೇವಿನಕಟ್ಟಿ ಶಾಮಲಾ ಕೋಂ.ಶ್ಯಾಮಸುಂದರ<br>ಕರಾತೆ ನಿರ್ಮಲಾ ಕೋಂ.ರಾಘವೇಂದ್ರ<br>ಬಾಕಳೆ ಶೋಭಾ ಕೋಂ.ಕೃಷ್ಣಕುಮಾರ<br>ದಲಬಂಜನ ಶರ್ಮಿಳಾ ಕೋಂ.ನಾಗೂಸಾ<br>ಶಿದ್ಲಿಂಗ ಅಂಬಾಸಾ ತಂದೆ ಧರ್ಮಸಾ<br>ಶಿದ್ಲಿಂಗ ಅಶ್ವಿನಿ ತಂದೆ ಧರ್ಮಸಾ<br>ಖೋಡೆ ವಿಮಲಾಬಾಯಿ ಕೊಂ.ದತ್ತುಸಾ<br>ಶಿದ್ಲಿಂಗ ಜಗದೀಶ ತಂದೆ ಶಂಕರಸಾ<br>ಶಿದ್ಲಿಂಗ ಘನಶ್ಯಾಮ ತಂದೆ ಶಂಕರಸಾ<br>ಕಾಟವೆ ಗೀತಾ ಕೋಂ.ರವೀಂದ್ರ<br>ಜಡಿ ಅಂಬುಜಾ ಕೋಂ.ಆನಂದ<br>ಶಿದ್ಲಿಂಗ ನಾರಾಯಣಸಾ ತಂದೆ ರಾಮನಾಥಸಾ<br>ಶಿದ್ಲಿಂಗ ಮೋಹನಲಾಲ ತಂದೆ ರಾಮನಾಥಸಾ<br>ಶಿದ್ಲಿಂಗ ರಾಘವೇಂದ್ರ ಉರ್ಫ ವಿಜಯ ತಂದೆ ಮೋತಿಲಾಲ | 615 | ಅ/1 | 0ಎ/25ಗು | – | ಖುಷ್ಕಿ | 0ಎ/25ಗು | | ಖುಷ್ಕಿ | ಲಾಗು ರಸ್ತೆ | ರಿ.ಸ. ನಂ. 614 ರ ಜಮೀನು | ರಿ.ಸ. ನಂ. 615ಅ/1ರ ಉಳಿದ ಕ್ಷೇತ್ರ | ಹೂಟಗಿ ರೈಲು ಮಾರ್ಗ | -- | |
| | ಒಟ್ಟು | 615 | ಅ/1 | 0ಎ-25ಗು | -- | | 0ಎ-25ಗು | | | | | | | | |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಸಹಿ ಆಗಿದೆ/-
(ಶ್ರೀನಿವಾಸ.ಎ)
ಕಂದಾಯ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ, (ಭೂಸ್ವಾಧೀ-1&3)

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka